ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

14 ಆಗಸ್ಟ್, 2026 ಶುಕ್ರವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -154 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಚೊಚ್ಚಲ ಫಿಫಾ ಏಷಿಯಾನ್ ಕಪ್ ಫುಟ್‌ಬಾಲ್ ಟೂರ್ನಿಯಿಂದ ಭಾರತವು ಹಿಂದೆ ಸರಿದಿದೆ. ಬ್ರೆಜಿಲ್ ವಿರುದ್ಧ ತವರಿನಲ್ಲಿ ಅಕ್ಟೋಬರ್‌ನಲ್ಲಿ ನಡೆಯುವ ಸೌಹಾರ್ದ ಪಂದ್ಯಕ್ಕೆ ಆದ್ಯತೆ ನೀಡಲಿದೆ ಎಂದು ಅಖಿಲ ಭಾರತ ಫುಟ್‌ಬಾಲ್ ಫೆಡರೇಷನ್ ಉಪ ಮಹಾ ಕಾರ್ಯದರ್ಶಿ ಎಂ.ಸತ್ಯನಾರಾಯಣ ಗುರುವಾರ ತಿಳಿಸಿದರು.




ಅರಕಲಗೂಡಿನಲ್ಲಿ ಅನಧಿಕೃತ ಶೆಡ್‌ಗಳ ತೆರವಿಗೆ ಅಧಿಕಾರಿಗಳ ಸಭೆ » 2

ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಸೆಪ್ಟೆಂಬರ್‌ನಲ್ಲಿ ನಡೆಯುವ ಟಿ-20 ಸರಣಿಯ ವೇಳಾಪಟ್ಟಿಯಲ್ಲಿ ಬದಲಾವಣೆಯಾಗುವ ಸಾಧ್ಯತೆ ಇದೆ



ಗದ್ದಲದಲ್ಲೇ ಅಂತ್ಯ ಕಂಡ ಸಂಸತ್ ಅಧಿವೇಶನ » 4


# ಸುಗಮ ಕಲಾಪ ನಡೆಸಲು ಸಹಕರಿಸಿ

## ವಿಪಕ್ಷ ನಾಯಕರಲ್ಲಿ ಸಿಎಂ ಕೋರಿಕೆ | ಮೊದಲ ದಿನದ ಅಧಿವೇಶನದಲ್ಲಿ ಅಗಲಿದ ಗಣ್ಯರಿಗೆ ಸಂತಾಪ

• ಪ್ರಜೋದಯ ವರದಿ

**ಬೆಂಗಳೂರು:** ವಿಧಾನಮಂಡಲ ಮುಂಗಾರು ಅಧಿವೇಶನವು ಗುರುವಾರ ಪ್ರಾರಂಭಗೊಂಡಿದೆ. ವಿಧಾನಸಭೆ ಹಾಗು ವಿಧಾನಪರಿಷತ್ ಎರಡೂ ಸದನಗಳಲ್ಲಿ ಮೊದಲ ದಿನದ ಕಲಾಪದಲ್ಲಿ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು.

ಹಂಗಾಮಿ ಸ್ಪೀಕರ್ ಟಿ.ಬಿ. ಜಯಚಂದ್ರ ಅವರು ವಿಧಾನಸಭೆ ಕಲಾಪವನ್ನು ಆರಂಭಿಸಿದರು. ಸದನಕ್ಕೆ ಹೊಸ ಸಚಿವರನ್ನು ಪರಿಚಯ ಮಾಡಿಕೊಡುವಂತೆ ಸ್ಪೀಕರ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸೂಚಿಸಿದರು. ಆದರೆ, ಮೊದಲು ಸಂತಾಪ ಸೂಚನಾ ಕಲಾಪ ನಡೆಸಿ, ಶುಕ್ರವಾರ ನೂತನ ಸಚಿವರ ಪರಿಚಯ ಮಾಡಿಕೊಡಿ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಮನವಿ ಮಾಡಿದರು. ವಿಪಕ್ಷಗಳ ಈ ಭಾವನೆಯನ್ನು ಗೌರವಿಸುವುದಾಗಿ ಮುಖ್ಯಮಂತ್ರಿ ಸಮ್ಮತಿಸಿದರು.

ಡಿ.ಕೆ.ಶಿವಕುಮಾರ್ ಹಾಗು ಸಂಪುಟದ ಕೆಲ ಸಚಿವರು ವಿರೋಧ ಪಕ್ಷದ ಸದಸ್ಯರ ಬಳಿ ತೆರಳಿ ಶುಭಾಶಯ ವಿನಿಮಯ ಮಾಡಿಕೊಂಡು, ಕೆಲಕಾಲ ಮಾತುಕತೆ ನಡೆಸಿ, ಅಧಿವೇಶನವನ್ನು ಸೌಹಾರ್ದಯುತವಾಗಿ, ಸುಗಮವಾಗಿ ನಡೆಸಲು ಸಹಕಾರ ನೀಡುವಂತೆ ಮನವಿ ಮಾಡಿದರು.

ಮುಖ್ಯಮಂತ್ರಿಯಾಗಿ ಮೊದಲ ಅಧಿವೇಶನವನ್ನು ಎದುರಿಸುತ್ತಿರುವ ಡಿ.ಕೆ.ಶಿವಕುಮಾರ್ ಅವರು ಆಡಳಿತ ಪಕ್ಷದ ಮೊಗಸಾಲೆಯಿಂದ ಸದನದ ಸಭಾಂಗಣ ಪ್ರವೇಶಿಸುವ ಮುನ್ನ ಸಭಾಂಗಣದ ಬಾಗಿಲಿಗೆ ದೀರ್ಘದಂಡ ನಮಸ್ಕಾರ ಮಾಡಿದರು. ಸಭಾಂಗಣದ ಒಳಗೆ ತಮ್ಮ ಕುರ್ಚಿಯಲ್ಲಿ ಆಸನರಾಗುವ ಮುನ್ನ



ಮತ್ತೊಮ್ಮೆ ಮೇಜಿಗೆ ಹಣೆ ಇಟ್ಟು ನಮಸ್ಕರಿಸಿದರು.

**ನೂತನ ಸಚಿವರಲ್ಲಿ ಉತ್ಸಾಹ**

ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನವನ್ನು ಪಡೆದುಕೊಂಡ ನೂತನ ಸಚಿವರು ಉತ್ಸಾಹದಲ್ಲಿದ್ದರು. ನಗು ನಗುತ್ತಾ ವಿಧಾನಸಭೆ ಹಾಗು ಮೊಗಸಾಲೆಯಲ್ಲಿ ಕಂಡುಬಂದರು. ನೂತನ ಸಚಿವರಿಗೆ ಕೆಲವು ಶಾಸಕರು ಅಭಿನಂದಿಸಿದರು. ಸಚಿವರಾದ ಚಲುವರಾಯಸ್ವಾಮಿ, ಮಧು ಬಂಗಾರಪ್ಪ, ಕೆ.ಎಸ್.ಬಸವಂತಪ್ಪ, ಶಿವರಾಜ್ ತಂಗಡಗಿ, ಲಕ್ಷ್ಮಣ ಸವದಿ, ಹೆಚ್.ಸಿ.ಬಾಲಕೃಷ್ಣ, ಕೆ.ಎಂ.ಶಿವಲಿಂಗೇಗೌಡ ಅವರು ಉತ್ಸಾಹದಿಂದಲೇ ಕಾಣಿಸಿಕೊಂಡರು.

ಸಚಿವ ಸ್ಥಾನದ ಆಕಾಂಕ್ಷಿಗಳಾಗಿದ್ದ ಹೆಚ್.ಕೆ.ಪಾಟೀಲ್, ಆರ್.ವಿ. ದೇಶಪಾಂಡೆ, ತನ್ವೀರ್ ಸೇಠ್, ಹೆಚ್.ಸಿ.ಮಹದೇವಪ್ಪ, ಬಿ.ಆರ್. ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್ ಯಾರ ಜೊತೆಗೆ ಮಾತನಾಡದೆ ಮೌನಕ್ಕೆ ಜಾರಿದರು.

ವಿಧಾನಪರಿಷತ್ತಿನ ನೂತನ ಸಭಾ ನಾಯಕರಾಗಿ ನೇಮಕಗೊಂಡಿರುವ ಡಾ.ಯತೀಂದ್ರ ಸಿದ್ದರಾಮಯ್ಯ

» ನಾಲ್ಕನೇ ಪುಟದಲ್ಲಿ

### ಚನ್ನಮ್ಮಗೆ ಸರ್ಕಾರಿ ಗೌರವ : ಸಿಎಂ ಸಮರ್ಥನೆ

ವಿಧಾನಸಭೆಯಲ್ಲಿ ಸಂತಾಪ ಸೂಚನೆ ನಿರ್ಣಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಡಿ.ಕೆ.ಶಿವಕುಮಾರ್ ಅವರು, ಚನ್ನಮ್ಮ ನಿಧನದ ಸಂದರ್ಭದಲ್ಲಿ ಸರ್ಕಾರಿ ಗೌರವ ನೀಡಿರುವ ಬಗ್ಗೆ ಪ್ರಸ್ತಾಪಿಸಿ, ಚನ್ನಮ್ಮ ಅವರು ತ್ಯಾಗದ ಹೆಣ್ಣು ಎಂದು ಹೇಳಿಕೊಳ್ಳಲು ನಮಗೆಲ್ಲರಿಗೂ ಹೆಮ್ಮೆ. ಅವರಿಗೆ ಸರ್ಕಾರದ ಗೌರವ ಕೊಡಬೇಕು ಎಂದಾಗ, ಮಾಜಿ ಪ್ರಧಾನಿಯವರ ಹೆಂಡತಿಗೆ ನೀಡಲು ಆಗುವುದಿಲ್ಲ ಎಂದೆಲ್ಲ ಚರ್ಚೆ ಬಂತು. ಕೊನೆಗೆ ನಾನು ದಿಟ್ಟ ನಿರ್ಧಾರ ತೆಗೆದುಕೊಂಡು ಅಧಿಕಾರಿಗಳಿಗೆ ಹೇಳಿದೆ. ನಮಗೆ ಅಧಿಕಾರ ಇದ್ದಾಗ ಹೃದಯ ಶ್ರೀಮಂತಿಕೆ ಪ್ರದರ್ಶಿಸಬೇಕು ಎಂದರು.

# ಜಿಲ್ಲೆಯಲ್ಲಿ ಬಂದ್ ವಿಫಲ

• ಪ್ರಜೋದಯ ವರದಿ



**ಹಾಸನ :** ಕಾವೇರಿ ನೀರಿನ ವಿಚಾರವಾಗಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರು ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ಜಿಲ್ಲೆಯಲ್ಲಿ ಯಾವುದೇ ಪ್ರಮುಖ ಸಂಘಟನೆಗಳು ಬೆಂಬಲ ನೀಡದ ಹಿನ್ನಲೆಯಲ್ಲಿ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಜಿಲ್ಲಾದ್ಯಂತ ವ್ಯಾಪಾರ ವಹಿವಾಟು ಎಂದಿನಂತೆ ಇತ್ತು.

ನಗರ ಸೇರಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲೂ ಸಾರಿಗೆ ವ್ಯವಸ್ಥೆ, ಸಾರ್ವಜನಿಕ ಚಟುವಟಿಕೆಗಳು ಸಹಜವಾಗಿಯೇ ಇದ್ದವು. ಬೆಳಿಗ್ಗೆಯಿಂದಲೇ ರಸ್ತೆಗಳಲ್ಲಿ ವಾಹನಗಳ ಸಂಚಾರ ಕಂಡು ಬಂದಿದ್ದು, ಜನರು ತಮ್ಮ ದೈನಂದಿನ ಕೆಲಸ ಕಾರ್ಯಗಳಿಗೆ ತೆರಳಿದರು. ಜಿಲ್ಲೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರಕ್ಕೆ ತೊಂದರೆ ಉಂಟಾಗಲಿಲ್ಲ.

ಹಾಸನದಿಂದ ಬೆಂಗಳೂರು, ಮಂಗಳೂರು, ಮೈಸೂರು ಸೇರಿ ವಿವಿಧ ನಗರ ಹಾಗೂ ಪಟ್ಟಣಗಳಿಗೆ ಬಸ್‌ಗಳು ಎಂದಿನಂತೆ ಸಂಚರಿಸಿದವು. ನಗರ ಹಾಗು ಗ್ರಾಮೀಣ ಭಾಗಗಳಲ್ಲಿಯೂ ಸರ್ಕಾರಿ ಬಸ್‌ಗಳ ಸಂಚಾರ ಸಾಮಾನ್ಯವಾಗಿತ್ತು. ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರ ಓಡಾಟವೂ ಎಂದಿನಂತೆಯೇ ಕಂಡುಬಂತು. ದೂರದ ಊರುಗಳಿಗೆ ತೆರಳಬೇಕಿದ್ದ ಪ್ರಯಾಣಿಕರು ಯಾವುದೇ ಆತಂಕವಿಲ್ಲದೆ ಪ್ರಯಾಣ ಬೆಳೆಸಿದರು. ಆಟೋ, ಕಾರು ಸೇರಿ ಖಾಸಗಿ ವಾಹನಗಳ ಸಂಚಾರದಲ್ಲೂ ಯಾವುದೇ ವ್ಯತ್ಯಯ ಕಂಡುಬರಲಿಲ್ಲ. ಪ್ರಮುಖ ರಸ್ತೆಗಳಲ್ಲಿ ಬೆಳಿಗ್ಗೆಯಿಂದಲೇ ವಾಹನಗಳ ಓಡಾಟ ಸಾಮಾನ್ಯವಾಗಿತ್ತು.

ಬಂದ್‌ಗೆ ಬೆಂಬಲ ವ್ಯಕ್ತವಾಗದ ಹಿನ್ನೆಲೆಯಲ್ಲಿ ಹಾಸನ ನಗರ ಸೇರಿ ಜಿಲ್ಲೆಯ ಪ್ರಮುಖ ಪಟ್ಟಣಗಳಲ್ಲಿ ಅಂಗಡಿ-ಮುಂಗಟ್ಟುಗಳು ಎಂದಿನಂತೆ ತೆರೆದಿದ್ದವು. ಮಾರುಕಟ್ಟೆ ಪ್ರದೇಶಗಳು, ವಾಣಿಜ್ಯ ಮಳಿಗೆಗಳು, ಹೋಟೆಲ್‌ಗಳು ಹಾಗೂ ಇತರೆ ವ್ಯಾಪಾರ ಮಳಿಗೆಗಳಲ್ಲಿ ಎಂದಿನಂತೆ ವ್ಯಾಪಾರ ವಹಿವಾಟು ನಡೆಯಿತು.

**ಬಂದ್ ಬೆಂಬಲಿಸದ ಸಂಘಟನೆಗಳು**

ಬಂದ್‌ಗೆ ಜಿಲ್ಲೆಯಲ್ಲಿ ಕನ್ನಡಪರ ಸಂಘಟನೆಗಳು, ಡಾ.ರಾಜ್‌ಕುಮಾರ್ ಅಭಿಮಾನಿಗಳ ಸಂಘ ಸೇರಿ ಬಹುತೇಕ ಸಂಘಟನೆಗಳು ಬಂದ್‌ಗೆ ತಮ್ಮ ಬೆಂಬಲವಿಲ್ಲವೆಂದು ಸ್ಪಷ್ಟಪಡಿಸಿದ್ದವು.

ಹೀಗಾಗಿ ಸಾರ್ವಜನಿಕರಲ್ಲಿದ್ದ ಗೊಂದಲವೂ ನಿವಾರಣೆಯಾಗಿತ್ತು. ಆದರೂ ಜಿಲ್ಲೆಯಾದ್ಯಂತ ಪೊಲೀಸರು ಮುನ್ನೆಚ್ಚರಿಕೆ ವಹಿಸಿದ್ದರು.

# ಹಾಸನ ಜಿಲ್ಲೆಯಲ್ಲಿ 326 ಶಿಕ್ಷಕರ ಹುದ್ದೆಗಳ ಭರ್ತಿಗೆ ಕ್ರಮ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ 15 ಸಾವಿರ ಶಿಕ್ಷಕರ ಹುದ್ದೆ ಭರ್ತಿಗೆ ಸರ್ಕಾರ ಮುಂದಾಗಿದ್ದು, ಹಾಸನ ಜಿಲ್ಲೆಯಲ್ಲಿ 326 ಹುದ್ದೆ ಭರ್ತಿಯಾಗಲಿದೆ.

ಈ ಪೈಕಿ ಕೊಪ್ಪಳ, ರಾಯಚೂರು, ಯಾದಗಿರಿ ಹಾಗು ಕಲಬುರಗಿಯಲ್ಲಿ ಒಂದು ಸಾವಿರಕ್ಕೂ ಅಧಿಕ ಹುದ್ದೆ ಭರ್ತಿ ಮಾಡಲಾಗುತ್ತಿದೆ. ಹಾಸನದಲ್ಲಿ ಕಂಪ್ಯೂಟರ್ ವಿಷಯಕ್ಕೆ 8, ಪದವೀಧರ ಪ್ರಾಥಮಿಕ 185, ದೈಹಿಕ (2)-1, ದೈಹಿಕ (1)-6, ಪ್ರಾಥಮಿಕ 2, ಪ್ರೌಢ ಶಾಲೆಯ 124 ಹುದ್ದೆಗೆ ಶಿಕ್ಷಕರ ನೇಮಕವಾಗಲಿದೆ.

ಶಾಲಾ ಶಿಕ್ಷಣ ಇಲಾಖೆಯು ಪ್ರಾಥಮಿಕ ಹಾಗು ಪ್ರೌಢಶಾಲೆಗಳ 15 ಸಾವಿರ ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಅಧಿಕೃತ ಅಧಿಸೂಚನೆ ಹೊರಡಿಸಿತ್ತು. ಈ ನೇಮಕಾತಿಯಲ್ಲಿ ಸಾಮಾನ್ಯ ವಿಷಯ ಶಿಕ್ಷಕರು, ಕಂಪ್ಯೂಟರ್ ಶಿಕ್ಷಕರು ಹಾಗು ದೈಹಿಕ ಶಿಕ್ಷಣ ಶಿಕ್ಷಕರ (ಗ್ರೇಡ್ 2) ಹುದ್ದೆಗಳು



ಸೇರಿವೆ. ಕಲ್ಯಾಣ ಕರ್ನಾಟಕ ಭಾಗದ ಸ್ಥಳೀಯ ವೃಂದದ ಹುದ್ದೆಗಳೂ ಸೇರಿ ಜಿಲ್ಲಾವಾರು ಮತ್ತು ವಿಷಯವಾರು ಖಾಲಿ ಹುದ್ದೆಗಳ ಸಂಪೂರ್ಣ ಪಟ್ಟಿಯನ್ನು ಇಲಾಖೆಯು ಬಿಡುಗಡೆ ಮಾಡಿದೆ.

ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಭರ್ತಿ ಮಾಡುವಾಗ ಆಧಾರ್ ಸಂಖ್ಯೆ ನಮೂದಿಸುವುದು ಕಡ್ಡಾಯವಾಗಿದೆ. ಪರೀಕ್ಷೆಯು ವಸ್ತು ವಿಷಯ ಮಾದರಿಯಲ್ಲಿದ್ದು, ಅಭ್ಯರ್ಥಿಗಳು ಉತ್ತರಗಳನ್ನು ಒಎಂಆರ್ ಶೀಟ್‌ನಲ್ಲಿ ಗುರುತಿಸಬೇಕಾಗುತ್ತದೆ. ಆ.18 ರಿಂದ ಅರ್ಜಿ ಸಲ್ಲಿಕೆ ಆರಂಭವಾಗಲಿದ್ದು, ಸೆ.7 ಕೊನೆ ದಿನವಾಗಿದೆ. ಅ.5 ಮತ್ತು 6 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ.

# ಏಳು ಗಂಟೆಗಳ ಕಾರ್ಯಾಚರಣೆ ಬಳಿಕ ಕಾಡಾನೆ ಸೆರೆ

• ಪ್ರಜೋದಯ ವರದಿ

**ಬೇಲೂರು:** ಹಗಲು ವೇಳೆ ಕಾಫಿ ತೋಟಗಳಲ್ಲಿ ವಿಶ್ರಾಂತಿ ಪಡೆಯುತ್ತಾ ರಾತ್ರಿಯಾದರೆ ಗ್ರಾಮ ಪ್ರವೇಶಿಸಿ ಜನರ ನೆಮ್ಮದಿಗೆ ಭಂಗ ತರುವುದು ಮಾತ್ರವಲ್ಲದೆ ಸಾರ್ವಜನಿಕರ ಮೇಲೆ ದಾಳಿ ಮಾಡುತ್ತಿದ್ದ ಕೆಪಿ 2 ಕಾಲರ್ ಹೆಸರಿನ ಕಾಡಾನೆಯನ್ನು ಗುರುವಾರ ಸತತ ಏಳು ಗಂಟೆಗಳ ಕಾರ್ಯಾಚರಣೆ ಬಳಿಕ ಸೆರೆ ಹಿಡಿಯಲಾಯಿತು.

ಸೆರೆ ಹಿಡಿಯುವ ದಿನವೂ ಆಟಾಟೋಪ ಮುಂದುವರಿಸಿದ ಕಾಡಾನೆ ಬೆಳಿಗ್ಗೆಯಿಂದ ಕುಮ್ಕಿ ಆನೆಗಳು, ಅರಣ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಯನ್ನು ಸುಸ್ತಾಗುವಂತೆ ಮಾಡಿತು. 20 ಕಿ.ಮೀ. ಓಡಾಡಿ ಸಂಜೆ 5ರ ವೇಳೆಗೆ ಅರವಳಿಕೆ ಚುಚ್ಚುಮದ್ದಿಗೆ ನಿತ್ರಾಣಗೊಂಡ ಆನೆಯನ್ನು ಕುಮ್ಕಿ ಆನೆಗಳ ಸಹಾಯದಿಂದ ಲಾರಿ ಹತ್ತಿಸಲಾಯಿತು. ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರು ಮಧ್ಯಾಹ್ನದಿಂದ ಕೊನೆಯವರೆಗೂ ಸ್ಥಳದಲ್ಲಿದ್ದು, ಸೆರೆ ಸಿಕ್ಕ ಆನೆಗೆ ನಮಸ್ಕರಿಸುವ ಮೂಲಕ ನೆಮ್ಮದಿಯ ನಿಟ್ಟುಸಿರು ಬಿಟ್ಟರು.

- 20 ಕಿ.ಮೀ. ಓಡಾಡಿ ಬಳಲಿದ ಆನೆ
- ನೆಮ್ಮದಿಯ ನಿಟ್ಟುಸಿರು ಬಿಟ್ಟ ಅಧಿಕಾರಿಗಳು

**ಡಾಟ್‌ಗೆ ಸಿಗದೆ ಓಡಾಡಿದ ಆನೆ**

ಎರಡು ಹೆಣ್ಣಾನೆಗಳಿಗೆ ರೇಡಿಯೋ ಕಾಲರ್ ಅಳವಡಿಕೆ ಹಾಗು ಕೆಪಿ 2 ಕಾಲರ್ ಹೆಸರಿನ ಆನೆ ಸೆರೆಗೆ ನಾಗರಹೊಳೆ ಆನೆ ಶಿಬಿರದಿಂದ ಮಹೇಂದ್ರ, ಏಕಲವ್ಯ ಹಾಗು ದುಬಾರೆ ಶಿಬಿರದಿಂದ ಪ್ರಶಾಂತ, ಧನಂಜಯ, ಈಶ್ವರ, ಲಕ್ಷ್ಮಣ ಮತ್ತು ಅಜ್ಜಯ್ಯ ಎಂಬ ಕುಮ್ಕಿ ಆನೆಗಳು ಬಂದಿವೆ.

ಆ.10 ಹಾಗು 11ರಂದು ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸಲಾಗಿದೆ. ಆ. 12ರಂದು ವಿಶ್ವ ಆನೆಗಳ ದಿನವಾದ್ದರಿಂದ ಕಾರ್ಯಾಚರಣೆ ಸ್ಥಗಿತಗೊಳಿಸಿ ಗುರುವಾರಕ್ಕೆ ಮುಂದೂಡಲಾಗಿತ್ತು. ಪೂರ್ವ ನಿರ್ಧಾರದಂತೆ ಬೆಳಿಗ್ಗೆ 10 ಗಂಟೆಗೆ ಚಿಲ್ಕೂರಿನಲ್ಲಿ



ನಿರ್ಮಿಸಿರುವ ತಾತ್ಕಾಲಿಕ ಶಿಬಿರದಿಂದ ಕುಮ್ಕಿ ಆನೆಗಳು ಲಾರಿ ಏರಿ ಪ್ರಯಾಣ ಬೆಳೆಸಿದವು. ಹೆಂಜ್ಜಿಹಳ್ಳಿಯ ಕಾಫಿ ತೋಟದಲ್ಲಿ ಕಾಡಾನೆ ಬೀಡು ಬಿಟ್ಟಿರುವ ಮಾಹಿತಿಯನ್ನು ಡ್ರೋನ್ ಕ್ಯಾಮರಾ ಮೂಲಕ ತಿಳಿದ ಅಧಿಕಾರಿಗಳು ಅಲ್ಲಿಗೆ ತೆರಳಿದರು. ಆನೆಯ ಸ್ಥಳ ಪತ್ತೆ ಹಚ್ಚಿ ಕುಮ್ಕಿ ಆನೆ ಏರಿದ ಪಶುವೈದ್ಯಾಧಿಕಾರಿಗಳು ದೂರದಿಂದ ಡಾಟ್ ಮಾಡಿದರಾದರೂ ಗುರಿ ತಪ್ಪಿತು. ಅದೇ ತಕ್ಷಣ ಮತ್ತೊಂದು ಡಾಟ್ ಮಾಡಿದರೂ ತಪ್ಪಿಸಿಕೊಂಡ ಕಾಡಾನೆ ಅಲ್ಲಿಂದ ಪಲಾಯನ ಮಾಡಿತು. ಹೆಂಜ್ಜಿಹಳ್ಳಿಯಿಂದ ಅರಮನೆ ಗುಡ್ಡ, ಕ್ಯಾನಹಳ್ಳಿ ತೋಟಗಳಲ್ಲಿ ಓಡಾಡಿತು. ಸಂಜೆ 5ರ ವೇಳೆಗೆ ಶಿರಗೂರು ಎಸ್ಟೇಟ್‌ನಲ್ಲಿ ಬೀಡು ಬಿಟ್ಟಿರುವ ಖಚಿತ ಮಾಹಿತಿ ಮೇರೆಗೆ ಕುಮ್ಕಿ ಆನೆಗಳನ್ನು ಲಾರಿ ಮೂಲಕ ಅಲ್ಲಿಗೆ ಸ್ಥಳಾಂತರಿಸಲಾಯಿತು. ಈ ವೇಳೆ ಗುರಿ ತಪ್ಪದ ಹಾಗೆ ಅರವಳಿಕೆ ಚುಚ್ಚುಮದ್ದು ನೀಡಿದ್ದರಿಂದ ಸುಮಾರು 1.5 ಕಿ.ಮೀ. ದೂರ ಓಡಿದ ಆನೆ ನಿತ್ರಾಣಗೊಂಡು ಮಲಗಿತು. ಬಳಿಕ ಸ್ಥಳಕ್ಕೆ ದೌಡಾಯಿಸಿದ ಕುಮ್ಕಿ ಆನೆಗಳ ನೆರವಿನಿಂದ ಹಗ್ಗಕಟ್ಟಿ ಸ್ವಲ್ಪ ದೂರ ಎಳೆದು ಲಾರಿ ಹತ್ತಿಸಲಾಯಿತು.

ಕಾರ್ಯಾಚರಣೆಯಲ್ಲಿ ಸಿಸಿಎಫ್ ಏಡುಕುಂಡಲು, ಡಿಸಿಎಫ್ ಸೌರಭ್ ಕುಮಾರ್, ಪಶುವೈದ್ಯಾಧಿಕಾರಿಗಳಾದ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಡಾ||ವಸೀಮ್, ಮೈಸೂರು ವೃತ್ತದ ಡಾ|| ಆದರ್ಶ ಹಾಗು ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ಡಾ||ವಿನಾಯಕ ಸೇರಿ 300ಕ್ಕೂ ಅಧಿಕ ಸಿಬ್ಬಂದಿ ಪಾಲ್ಗೊಂಡಿದ್ದರು.

### ಪಿಎಸ್‌ಐ ಜೀಪ್ ಬೆನ್ನಟ್ಟಿದ ಕಾಡಾನೆ

ತನ್ನ ಸೆರೆಗೆ ನೂರಾರು ಸಿಬ್ಬಂದಿ, ಏಳು ಕುಮ್ಕಿ ಆನೆಗಳು ಬೆನ್ನಟ್ಟಿದ್ದರೂ ಎಲ್ಲರನ್ನೂ ಹಿಮ್ಮೆಟ್ಟಿಸಬಲ್ಲೇ ಎಂಬ ಆತ್ಮಸ್ಥೈರ್ಯದಲ್ಲಿ ಕೆಪಿ 2 ಕಾಲರ್ ಆನೆ ಇಡೀ ದಿನ ಸಂಚರಿಸಿತು. ಸಾರ್ವಜನಿಕರ ಹಿತದೃಷ್ಟಿ ಹಾಗು ಭದ್ರತೆ ಕಾರಣದಿಂದ ಅರೇಹಳ್ಳಿ ಪಿಎಸ್‌ಐ ಶೋಭಾ ಭರಮ್ಮಣ್ಣನವರ್ ಸ್ಥಳದಲ್ಲೇ ಇದ್ದರು. ತಾಲ್ಲೂಕಿನ ಕೋಗೋಡು ಬೇಡಿ ಎಸ್ಟೇಟ್ ಬಳಿ ಹತ್ತಾರು ಲಾರಿ, ಸ್ಥಳೀಯರು ಇದ್ದಾಗಲೇ ಕಾಫಿ ಎಸ್ಟೇಟ್‌ನಿಂದ ಹೊರ ಬಂದ ಕಾಡಾನೆ ಪಿಎಸ್‌ಐ ಇದ್ದ ಜೀಪ್ ಬೆನ್ನಟ್ಟಿತು. ಚಾಲಕ ಸಮಯ ಪ್ರಜ್ಞೆ ಮೆರೆದು ಜೀಪ್ ಓಡಿಸಿದ್ದರಿಂದ ಆನೆ ರಸ್ತೆ ದಾಟಿ ಕಾಫಿ ತೋಟಕ್ಕೆ ನುಗ್ಗಿತು. ಕಾಡಾನೆ ಓಡಿಬಂದ ಆ ಕ್ಷಣ ಎಲ್ಲರಲ್ಲೂ ಭಯ ಹುಟ್ಟಿಸಿತು.

# ಸ್ವಯಂ ಪ್ರೇರಿತ ತೆರವು ಮೂಲಕ ಮಾದರಿಯಾದ ವ್ಯಾಪಾರಿಗಳು

• ಪ್ರಜೋದಯ ವರದಿ

**ಹಾಸನ:** ಸಾರ್ವಜನಿಕರ ಹಿತದೃಷ್ಟಿಯಿಂದ ನಿರ್ಮಿಸಲಾದ ಫುಟ್ ಪಾತ್ ಮೇಲೆ ತಲೆ ಎತ್ತಿರುವ ಬೀದಿಬದಿ ಅಂಗಡಿಗಳ ತೆರವು ಕಾರ್ಯಾಚರಣೆ ಅಧಿಕಾರಿಗಳಿಗೆ ಸವಾಲಾಗಿರುವ ಸಂದರ್ಭದಲ್ಲಿ ಬೇಲೂರು ತಾಲ್ಲೂಕಿನ ಹಗರೆ ಗ್ರಾಮದಲ್ಲಿ ವ್ಯಾಪಾರಿಗಳೇ ಸ್ವಯಂ ಪ್ರೇರಿತವಾಗಿ ಅಂಗಡಿಗಳ ತೆರವು ಮಾಡುವ ಮೂಲಕ ಮಾದರಿಯಾಗಿದ್ದಾರೆ.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಎಲ್ಲಾ ಕಡೆ ಫುಟ್‌ಪಾತ್ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ. ಹಾಸನ ಸೇರಿ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಸ್ಥಳೀಯ ಆಡಳಿತ ಅಧಿಕಾರಿಗಳು ಕಾರ್ಯಾಚರಣೆ ಕೈಗೊಂಡಿದ್ದಾರೆ. ವ್ಯಾಪಾರಿಗಳಿಗೆ



ನೋಟೀಸ್ ನೀಡುವುದು, ಸ್ವತಃ ಜೆಸಿಬಿ ಮೂಲಕ ತೆರವುಗೊಳಿಸುವುದು, ಅಧಿಕಾರಿ ಹಾಗು ಸಾರ್ವಜನಿಕರ ನಡುವೆ ವಾಗ್ವಾದ ನಡೆಯುತ್ತಲೇ ಇರುತ್ತದೆ. ಆದರೆ, ಹಗರೆಯಲ್ಲಿ ಬೀದಿ ಬದಿ ವ್ಯಾಪಾರಿಗಳು ಗೊಂದಲಕ್ಕೆ ಅವಕಾಶ ನೀಡದೆ ಗ್ರಾಮ ಪಂಚಾಯಿತಿ ಮತ್ತು ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳ ಸೂಕ್ಷ್ಮ ಸೂಚನೆಗೆ ಎಚ್ಚೆತ್ತು ಪ್ರಜ್ಞೆ ಮೆರೆದಿದ್ದಾರೆ.

**32 ಅಂಗಡಿಗಳ ತೆರವು**

ರಾಷ್ಟ್ರೀಯ ಹೆದ್ದಾರಿ 373ರ ಹಾಸನ-ಬೇಲೂರು ಮಧ್ಯದ ಹಗರೆ ಗ್ರಾಮದಲ್ಲಿ ರಸ್ತೆಯ ಎರಡೂ ಬದಿಯ ಪಾದಚಾರಿ ಮಾರ್ಗಗಳ ಮೇಲೆ ಅತಿಕ್ರಮಣವಾಗಿ ಪೆಟ್ಟಿಗೆ ಅಂಗಡಿ ಇಟ್ಟುಕೊಳ್ಳಲಾಗಿತ್ತು. ತಾತ್ಕಾಲಿಕ ಶೆಡ್ ನಿರ್ಮಿಸಿಕೊಂಡು ವ್ಯಾಪಾರ ಮಾಡುತ್ತಿದ್ದ ವ್ಯಾಪಾರಿಗಳಿಗೆ ತೆರವು ಮಾಡಬೇಕೆಂಬ ಸೂಚನೆಯನ್ನು ಬುಧವಾರ ಅಧಿಕಾರಿಗಳು ನೀಡಿದ್ದರು. ಆ ಹಿನ್ನಲೆಯಲ್ಲಿ 32 ಗೂಡಂಗಡಿಗಳ ಮಾಲೀಕರು ಸ್ವಯಂ ಪ್ರೇರಿತವಾಗಿ ರಸ್ತೆ ಬಿಟ್ಟುಕೊಟ್ಟಿದ್ದಾರೆ.

ತೆರವು ಮಾಡದಿದ್ದರೆ ಗುರುವಾರ ಸಂಪೂರ್ಣ ತೆರವು ಮಾಡಿ ಸಾಮಾಗ್ರಿ ತೆಗೆದುಕೊಂಡು ಹೋಗುವುದಾಗಿ ಅಧಿಕಾರಿಗಳು ಎಚ್ಚರಿಸಿದ್ದರು. ಅವರ ಸೂಚನೆ ಮೇರೆಗೆ ಕೆಲವು ಹೂ-ಹಣ್ಣು ಕಾಯಿ ಅಂಗಡಿಯವರು ಬುಧವಾರವೇ ರಸ್ತೆಯಿಂದ ಹಿಂದೆ ಸರಿದಿದ್ದರು.

» ನಾಲ್ಕನೇ ಪುಟದಲ್ಲಿ

# ಚನ್ನಮ್ಮ ದೇವೇಗೌಡರಿಗೆ ಅಧಿವೇಶನದಲ್ಲಿ ಸಂತಾಪ

• ಪ್ರಜೋದಯ ವರದಿ

**ಹಾಸನ:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಹಾಗು ಶ್ರೀಮತಿ ಚನ್ನಮ್ಮ ಅವರ ದಾಂಪತ್ಯ ಜೀವನ ನಮಗೆಲ್ಲರಿಗೂ ಮಾದರಿಯಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ವಿಧಾನ ಮಂಡಲ ಅಧಿವೇಶನದ ಮೊದಲ ದಿನ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸುವ ಸಂದರ್ಭದಲ್ಲಿ ಮಾತನಾಡಿದ ಅವರು, ಸತಿ-ಪತಿ ಹೇಗಿರಬೇಕೆಂಬುದಕ್ಕೆ ಈ ಜೋಡಿ ಸಾಕ್ಷಿಯಾಗಿದೆ. ಸಮಾಜಕ್ಕೆ ಅವರು ಅಗಾಧ ಕೊಡುಗೆ ನೀಡಿದ್ದಾರೆ. ಶ್ರೀಮತಿ ಚನ್ನಮ್ಮ ಅವರ ಅಂತ್ಯಕ್ರಿಯೆಗೆ ರಾಜ್ಯ ಸರ್ಕಾರ ಸಕಲ ವ್ಯವಸ್ಥೆ ಮಾಡಿದ್ದು ಅದಕ್ಕೆ ಧನ್ಯವಾದ ಸಲ್ಲಿಸುತ್ತೇನೆಂದರು.

# ಕ್ರಾಫರ್ಡ್ ಆಸ್ಪತ್ರೆ ಐಸೋಲೇಷನ್ ವಾರ್ಡ್ ಉದ್ಘಾಟನೆ

• ಪ್ರಜೋದಯ ವರದಿ

**ಸಕಲೇಶಪುರ:** ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ಹಂತ ಹಂತವಾಗಿ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗುವುದೆಂದು ಶಾಸಕ ಸಿಮೆಂಟ್ ಮಂಜು ಅವರು ತಿಳಿಸಿದರು.

ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯಲ್ಲಿ 32 ಲ.ರೂ. ವೆಚ್ಚದಲ್ಲಿ ನಿರ್ಮಿಸಿರುವ 12 ಹಾಸಿಗೆಗಳ ನೂತನ ಐಸೋಲೇಷನ್ ವಾರ್ಡ್ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನರು ಸರ್ಕಾರಿ ಆಸ್ಪತ್ರೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿದ್ದಾರೆ. ಬಡ ಹಾಗು ಮಧ್ಯಮ ವರ್ಗದ ಜನರಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರಿ



ಆಸ್ಪತ್ರೆಗಳ ಮೂಲಸೌಕರ್ಯ ಅಭಿವೃದ್ಧಿ ಹಾಗು ಅಗತ್ಯ ವೈದ್ಯಕೀಯ ಸೌಲಭ್ಯಗಳ ಹೆಚ್ಚಳಕ್ಕೆ ಆದ್ಯತೆ ನೀಡಲಾಗುವುದು ಎಂದರು.

ನೂತನ ಐಸೋಲೇಷನ್ ವಾರ್ಡ್‌ನಿಂದ ಸಾಂಕ್ರಾಮಿಕ ರೋಗಗಳು ಸೇರಿ ಪ್ರತ್ಯೇಕ ಆರೈಕೆಯ ಅಗತ್ಯವಿರುವ ರೋಗಿಗಳಿಗೆ ಪ್ರತ್ಯೇಕವಾಗಿ ಚಿಕಿತ್ಸೆ ನೀಡಲು ಅನುಕೂಲವಾಗಲಿದೆ. ಅದರಿಂದ ಇತರ ರೋಗಿಗಳಿಗೆ ಸೋಂಕು ಹರಡುವುದನ್ನು ನಿಯಂತ್ರಿಸುವುದರ ಜೊತೆಗೆ ಅಗತ್ಯವಿರುವ ರೋಗಿಗಳಿಗೆ ಉತ್ತಮ ಆರೈಕೆ ಒದಗಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಯುವರಾಜ್ ಅವರು ಮಾತನಾಡಿ, ಆಸ್ಪತ್ರೆಯ ಮೂಲಸೌಕರ್ಯ ಅಭಿವೃದ್ಧಿಯಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ನೂತನ ಐಸೋಲೇಷನ್ ವಾರ್ಡ್ ಮೂಲಕ ಅಗತ್ಯವಿರುವ ರೋಗಿಗಳಿಗೆ ಪ್ರತ್ಯೇಕ ಚಿಕಿತ್ಸಾ ವ್ಯವಸ್ಥೆ ದೊರೆಯಲಿದ್ದು, ಆರೋಗ್ಯ ಸೇವೆಯ ಗುಣಮಟ್ಟ ಹೆಚ್ಚಲಿದೆ ಎಂದರು.

ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ|| ಅರುಣ್ ಕುಮಾರ್, ವೈದ್ಯರು, ಆಸ್ಪತ್ರೆಯ ಸಿಬ್ಬಂದಿ ಹಾಗು ಸಾರ್ವಜನಿಕರು ಉಪಸ್ಥಿತರಿದ್ದರು.

# ಲೋಕಾಯುಕ್ತ ಬಲೆಗೆ ಹಳೇಬೀಡು ಪಿಎಸ್‌ಐ

• ಪ್ರಜೋದಯ ವರದಿ

**ಬೇಲೂರು:** ಎನ್‌ಸಿಆರ್ ಪ್ರಕರಣದ ಇತ್ಯರ್ಥಕ್ಕೆ ಲಂಚಕ್ಕೆ ಬೇಡಿಕೆ ಇಟ್ಟು, ಮುಂಗಡ ಹಣ ಪಡೆಯುತ್ತಿದ್ದ ವೇಳೆ ಹಳೇಬೀಡು ಪೊಲೀಸ್ ಠಾಣೆಯ ಸಬ್‌ಇನ್‌ಸ್ಪೆಕ್ಟರ್ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.



ಸಬ್‌ಇನ್‌ಸ್ಪೆಕ್ಟರ್ ಮಂಜುನಾಥ್ ಎನ್‌ಸಿಆರ್ ಪ್ರಕರಣವನ್ನು ಇತ್ಯರ್ಥಪಡಿಸಲು ನವೀನ ಎಂಬು ವವರಿಂದ 1 ಲ.ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದು, ಮುಂಗಡವಾಗಿ ಗುರುವಾರ 20 ಸಾವಿರ ರೂ. ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರು ಅವರನ್ನು ಹಣದ ಸಮೇತ ವಶಕ್ಕೆ ಪಡೆದಿದ್ದಾರೆ. ಲೋಕಾಯುಕ್ತ ಇನ್ಸ್‌ಪೆಕ್ಟರ್‌ಗಳಾದ ಶಿಲ್ಪಾ ಹಾಗು ಗವಿರಾಜು ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ದಾಳಿಯ ಸಂದರ್ಭದಲ್ಲಿ ಅಗತ್ಯ ದಾಖಲೆಗಳು ಹಾಗೂ ಹಣದ ಕುರಿತು ಪರಿಶೀಲನೆ ನಡೆಸಲಾಗಿದೆ.

## ಪ್ರಹ್ಲಾದ್ ಜೋಶಿ, ಗಜೇಂದ್ರ ಸಿಂಗ್, ನಿತಿನ್ ಗಡ್ಕರಿ ಭೇಟಿಯಾದ ಸಂಸದ ಶ್ರೇಯಸ್ ಪಟೇಲ್

# ಐಐಟಿ, ಪ್ರವಾಸೋದ್ಯಮ, ರಸ್ತೆ ಅಭಿವೃದ್ಧಿಗೆ ಕೇಂದ್ರಕ್ಕೆ ಮನವಿ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಅಭಿವೃದ್ಧಿಗೆ ಅನುದಾನ ಮತ್ತು ಯೋಜನೆಗಳನ್ನು ಜಾರಿಗೊಳಿಸುವಂತೆ ಸಂಸದ ಶ್ರೇಯಸ್ ಪಟೇಲ್ ಅವರು ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ, ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.

ನಗರದಲ್ಲಿ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಸ್ಥಾಪಿಸುವಂತೆ ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ ಅವರಿಗೆ ಮತ್ತೊಮ್ಮೆ ಮನವಿ ಸಲ್ಲಿಸಿದರು. ಐಐಟಿ ಸ್ಥಾಪನೆಗಾಗಿ ಹಾಸನದಲ್ಲಿ ಈಗಾಗಲೇ ಸೂಕ್ತ ಜಾಗ ಗುರುತಿಸಿ ಮೀಸಲಿರಿಸಲಾಗಿದೆ. ಈ ಯೋಜನೆಯನ್ನು ಆದ್ಯತೆಯ ಮೇರೆಗೆ ಪರಿಗಣಿಸಿ ಅಗತ್ಯ ಅನುಮೋದನೆ ಹಾಗು ಮುಂದಿನ ಪ್ರಕ್ರಿಯೆಗಳನ್ನು ಶೀಘ್ರವಾಗಿ ಆರಂಭಿಸುವಂತೆ ಒತ್ತಾಯಿಸಿದರು.

ಐಐಟಿ ಸ್ಥಾಪನೆಯಾದರೆ ವಿದ್ಯಾರ್ಥಿಗಳಿಗೆ ಉನ್ನತ ತಾಂತ್ರಿಕ ಶಿಕ್ಷಣ, ಸಂಶೋಧನೆ, ನವೋದ್ಯಮ ಹಾಗು ಉದ್ಯೋಗಾವಕಾಶಗಳಿಗೆ ಹೊಸ ಅವಕಾಶಗಳು ದೊರೆಯಲಿವೆ. ಜಿಲ್ಲೆಯ ವಿದ್ಯಾರ್ಥಿಗಳು ಮತ್ತು ಜನರ ಬಹು



ಕಾಲದ ಬೇಡಿಕೆಯಾಗಿರುವ ಐಐಟಿ ಸ್ಥಾಪನೆಗೆ ಕೇಂದ್ರ ಸರ್ಕಾರ ಶೀಘ್ರ ಸಕಾರಾತ್ಮಕ ನಿರ್ಧಾರ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

**ಸ್ಮಾರಕ ಸಂರಕ್ಷಣೆ 21.50 ಕೋ.ರೂ.ಗೆ ಮನವಿ**

ಜಿಲ್ಲೆಯ ಐತಿಹಾಸಿಕ, ಪಾರಂಪರಿಕ ಹಾಗು ಸಾಂಸ್ಕೃತಿಕ ಮಹತ್ವ ಹೊಂದಿರುವ ಪ್ರಮುಖ ಸ್ಮಾರಕಗಳ ಸಂರಕ್ಷಣೆ ಮತ್ತು ಸಮಗ್ರ ಅಭಿವೃದ್ಧಿಗಾಗಿ 21.50 ಕೋ.ರೂ. ಅನುದಾನ ಮಂಜೂರು ಮಾಡುವಂತೆ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರಿಗೆ ಮನವಿ ಸಲ್ಲಿಸಿದರು.

ಹಾಸನದ ಹೊಯ್ಸಳ ವಾಸ್ತುಶಿಲ್ಪದ ವೈಭವ ಹಾಗು ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸುವುದರ ಜೊತೆಗೆ, ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ನೀಡುವುದು ಇದರ ಪ್ರಮುಖ ಉದ್ದೇಶವಾಗಿದೆ. ಹೀಗಾಗಿ ಶ್ರವಣಬೆಳಗೊಳ ಸ್ಮಾರಕ ಸಂರಕ್ಷಣೆಗೆ 13 ಕೋ.ರೂ., ಮಂಜರಾಬಾದ್ ಕೋಟೆ ಅಭಿವೃದ್ಧಿಗೆ 4 ಕೋ.ರೂ., ಹೊಯ್ಸಳೇಶ್ವರ ದೇವಸ್ಥಾನ, ಹಳೇಬೀಡು ಹಾಗು ಹುಚೇಶ್ವರ ದೇವಸ್ಥಾನ ಅಭಿವೃದ್ಧಿಗೆ 3 ಕೋ.ರೂ., ಅರಸೀಕೆರೆ ಈಶ್ವರ ದೇವಸ್ಥಾನದ ಮುಂಭಾಗದ ಗುಮ್ಮಟ ಸಂರಕ್ಷಣೆ 1.50 ಕೋ.ರೂ. ಸೇರಿ ಒಟ್ಟು 21.50 ಕೋ.ರೂ. ಅನುದಾನ ಮಂಜೂರು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

ಹಾಸನದ ಐತಿಹಾಸಿಕ ಸ್ಮಾರಕಗಳು ಕೇವಲ





ಕಟ್ಟಡಗಳಲ್ಲ, ಅವು ನಮ್ಮ ಇತಿಹಾಸ, ಸಂಸ್ಕೃತಿ ಕಲೆ ಮತ್ತು ಹೆಮ್ಮೆಯ ಜೀವಂತ ಸಾಕ್ಷಿಗಳು. ಇವುಗಳ ಸಂರಕ್ಷಣೆಯ ಮೂಲಕ ಹಾಸನದ ಪ್ರವಾಸೋದ್ಯಮಕ್ಕೆ ಹೊಸ ಆಯಾಮ ನೀಡಲು ಹಾಗು ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಲು ನೆರವಾಗುವಂತೆ ಕೋರಿದರು.

**ರಸ್ತೆ ಅಭಿವೃದ್ಧಿಗೆ ಮತ್ತೊಮ್ಮೆ ಮನವಿ**

ಜಿಲ್ಲೆಯ ಪ್ರಮುಖ ರಸ್ತೆ ಹಾಗು ಹೆದ್ದಾರಿ ಕಾಮಗಾರಿಗಳಿಗೆ ಶೀಘ್ರ ಅನುಮೋದನೆ ಮತ್ತು ಅನುದಾನ ನೀಡುವಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಮತ್ತೊಮ್ಮೆ ಸಂಸದ ಶ್ರೇಯಸ್ ಪಟೇಲ್ ಅವರು ಮನವಿ ಸಲ್ಲಿಸಿದರು.

ನಗರದಲ್ಲಿ 102 ಕೋ.ರೂ. ವೆಚ್ಚದ ಒಟಿಐ ಕಾಮಗಾರಿ, ಎನ್‌ಹೆಚ್-48 ಮತ್ತು ಎನ್‌ಹೆಚ್-373ರ ಸುಮಾರು 9 ಕಿ.ಮೀ. ರಸ್ತೆ ಸುಧಾರಣೆಗೆ ಶೀಘ್ರ ಅನುಮೋದನೆ ನೀಡಿ ಕಾಮಗಾರಿ ಆರಂಭಿಸುವಂತೆ ಒತ್ತಾಯಿಸಿದರು.

ಬೇಲೂರು-ಹಾಸನ ಎನ್‌ಹೆಚ್-373 ನಾಲ್ಕು ಪಥ ರಸ್ತೆ ಅಭಿವೃದ್ಧಿ ಪಡಿಸುವ ಯೋಜನೆಗೆ ಅಗತ್ಯ ಅನುಮೋದನೆ ಹಾಗು ಮಂಜೂರಾತಿ ನೀಡುವಂತೆ ಮನವಿ ಮಾಡಲಾಗಿದೆ. ಬಾಣಾವರ-ಹುಳಿಯಾರ್ ಎನ್‌ಹೆಚ್-69 ಅಭಿವೃದ್ಧಿ 48 ಕಿ.ಮೀ. ರಸ್ತೆ ಅಗಲೀಕರಣ ಮತ್ತು ಬಲಪಡಿಸುವ ಕಾಮಗಾರಿಗೆ 106.63 ಕೋ.ರೂ. ಮಂಜೂರು ಮಾಡಿ ಕಾಮಗಾರಿ ಆರಂಭಿಸುವಂತೆ ಮನವಿ ಮಾಡಿದ್ದಾರೆ.

ಮೊಸಳೆಹೊಸಹಳ್ಳಿ ಎನ್‌ಹೆಚ್-373ರಲ್ಲಿ ಫ್ಲೈಓವರ್, ಗ್ರೇಡ್ ಸೆಪರೇಟರ್ 2025ರ ಸೆಪ್ಟೆಂಬರ್‌ನಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ 10 ಮಂದಿ ಅಮೂಲ್ಯ ಜೀವಗಳನ್ನು ಕಳೆದುಕೊಂಡ ಹಿನ್ನಲೆ, ಸ್ಥಳದಲ್ಲಿ ತಕ್ಷಣ ತಾಂತ್ರಿಕ ಪರಿಶೀಲನೆ ನಡೆಸಿ ಶಾಶ್ವತ ರಸ್ತೆ ಸುರಕ್ಷತಾ ಪರಿಹಾರ ಕಲ್ಪಿಸುವಂತೆ ಮನವಿ ಮಾಡಿದ್ದಾರೆ.

# ನಾಳೆ ರಕ್ತದಾನ ಶಿಬಿರ

• ಪ್ರಜೋದಯ ವರದಿ

**ಹಾಸನ:** ವಿವಿಧ ಸಂಘಟನೆಗಳ ಆಶ್ರಯದಲ್ಲಿ ಆ.15 ರಂದು ನಗರದ ಎಂ.ಜಿ. ರಸ್ತೆಯ ಲ್ಲಿರುವ ವಿಶ್ವೇಶ್ವರಯ್ಯ ಭವನದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಸೀನಿಯರ್ ಚೇಂಬರ್ ಇಂಟರ್‌ನ್ಯಾಷನಲ್ ಅಧ್ಯಕ್ಷ ನಾರಾಯಣ್ ಅವರು ತಿಳಿಸಿದರು.

ಇತ್ತೀಚೆಗೆ ರಕ್ತದಾನ ಮಾಡುವವರ ಸಂಖ್ಯೆ ಕಡಿಮೆ ಇರುವುದರಿಂದ ಸಾರ್ವಜನಿಕರನ್ನು ಉತ್ತೇಜಿಸಲು, ರಕ್ತದಾನ ಮಾಡಿ, ಜೀವ ಉಳಿಸಿ ಎಂಬ ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಮಾಡಲಾಗುತ್ತಿದೆ. ಸಂಗ್ರಹ ವಾದ ರಕ್ತವನ್ನು ರಕ್ತನಿಧಿ ಕೇಂದ್ರಕ್ಕೆ ನೀಡಲಾಗುವುದು. ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ, ರೋಟರಿ ಕ್ಲಬ್ ಆಫ್ ಹಾಸನ್ ಟೈಗರ್ಸ್, ಜೀವ ರಕ್ಷ ರಕ್ತ ಕೇಂದ್ರ, ಸ್ಮೃತಿ ಮಂದಾನ ಅಲ್ಯುಮಿನಿ ಅಸೋಸಿಯೇಷನ್, ಎಲ್.ವಿ. ಪಾಲಿಟೆಕ್ನಿಕ್, ಲಯನ್ಸ್ ಕ್ಲಬ್ ಆಫ್ ಹಾಸನ, ಕರ್ನಾಟಕ ಇಂಜಿನೀಯರ್ಸ್ ಅಸೋಸಿಯೇಷನ್ ಹಾಸನ ಮತ್ತು ಹಾಸನ್ ಡಿಸ್ಟ್ರಿಕ್ಟ್ ಇಂಡಸ್ಟ್ರೀಸ್ ಅಸೋಸಿಯೇಷನ್ ಮೊದಲಾದ ಸಂಘಟನೆಗಳ ಆಶ್ರಯದಲ್ಲಿ ಶಿಬಿರ ಆಯೋಜಿಸಲಾಗಿದೆ ಎಂದರು.

## ಸ್ಪೀಕರ್ ಚುನಾವಣೆ ಬಹಿಷ್ಕರಣೆಗೆ ನಿರ್ಧಾರ

**ಬೆಂಗಳೂರು:** ವಿಧಾನ ಮಂಡಲ ಅಧಿವೇಶನ ಶುರುವಾಗಿದ್ದು, ಎರಡನೇ ದಿನ ಶುಕ್ರವಾರ ವಿಧಾನ ಸಭೆಯ ಸಭಾಧ್ಯಕ್ಷರ ಚುನಾವಣೆ ನಡೆಯಲಿದೆ. ಈ ಉಚುನಾವಣೆಯನ್ನು ಬಹಿಷ್ಕರಿಸುವುದಾಗಿ ವಿಪಕ್ಷ ಬಿಜೆಪಿ ನಾಯಕ ಆರ್.ಅಶೋಕ್ ತಿಳಿಸಿದ್ದಾರೆ.

ಆದರೆ ಚುನಾವಣೆಯ ಬಳಿಕ ಪೀಠಕ್ಕೆ ಎಂದಿನಂತೆಯೇ ಗೌರವದಿಂದ ನಡೆದುಕೊಳ್ಳುತ್ತೇವೆ. ಇದು ಕಾಂಗ್ರೆಸ್‌ನ ಸರ್ವಾಧಿಕಾರದ ವಿರುದ್ಧದ ಪ್ರತಿಭಟನೆ ಎಂದಿದ್ದಾರೆ. ಇತ್ತೀಚೆಗೆ ವಿಧಾನ ಪರಿಷತ್ ಸಭಾಧ್ಯಕ್ಷ ಸ್ಥಾನದಲ್ಲಿದ್ದ ಬಸವರಾಜ ಹೊರಟ್ಟಿ ಅವರ ವಿರುದ್ಧ ಅವಿಶ್ವಾಸ ಮತ ಮಂಡನೆಗೆ ಕಾಂಗ್ರೆಸ್ ಸರ್ಕಾರ ಮುಂದಾಗಿತ್ತು. ಬಳಿಕ ಹೊರಟ್ಟಿ ಅವರೇ ರಾಜೀನಾಮೆ ನೀಡಿದರು.

ತೆರವಾದ ಆ ಸ್ಥಾನಕ್ಕೆ ಕಾಂಗ್ರೆಸ್‌ನಿಂದ ಸಲೀಂ ಅಹ್ಮದ್ ಅವರನ್ನು ಸೂಚಿಸಿದರೆ, ಉಪಸಭಾ ಕ್ಷೇತ್ರ ಸ್ಥಾನಕ್ಕೆ ವಿರಾಪೇಟೆಯ ಶಾಸಕ ಎ.ಎಸ್. ಪೊನ್ನಣ್ಣ ಅವರನ್ನು ಸೂಚಿಸಲಾಗಿದೆ. ಇನ್ನೂ ವಿಧಾನಸಭಾ ಸ್ಪೀಕರ್ ಆಗಿ ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಅವರು ಕಣದಲ್ಲಿರಲಿದ್ದಾರೆ. ಬಹುತೇಕ ಇವರೇ ಆ ಸ್ಥಾನವನೆ ಆಯ್ಕೆ ಮಾಡಲು ಕಾಂಗ್ರೆಸ್ ನಿರ್ಧರಿಸಿದೆ.

# ಅರಕಲಗೂಡಿನಲ್ಲಿ ಅನಧಿಕೃತ ಶೆಡ್‌ಗಳ ತೆರವಿಗೆ ಅಧಿಕಾರಿಗಳ ಸಭೆ

### ಪ್ರಜೋದಯ ಪತ್ರಿಕಾ ವರದಿ ಪರಿಣಾಮ | ತಾಲ್ಲೂಕು ಆಡಳಿತದಿಂದ ಚುರುಕಿನ ಕ್ರಮ

• ರವಿ ದುಮ್ಮಿ

**ಅರಕಲಗೂಡು:** ಪಟ್ಟಣದ ರಸ್ತೆ ಬದಿ ಹಾಗೂ ಪಾದಚಾರಿ ಮಾರ್ಗಗಳನ್ನು ಅತಿಕ್ರಮಿಸಿ ಕೊಂಡು ನಿರ್ಮಿಸಿರುವ ಅನಧಿಕೃತ ಶೆಡ್‌ಗಳು, ಗೂಡಂಗಡಿಗಳು ಹಾಗೂ ವಾಣಿಜ್ಯ ಮಳಿಗೆಗಳ ತೆರವಿಗೆ ತಾಲೂಕು ಆಡಳಿತ ಮುಂದಾಗಿದೆ. ಈ ಕುರಿತು ಸುದ್ದಿ ಪ್ರಕಟವಾದ ಬೆನ್ನಲ್ಲೇ ತಹಸೀಲ್ದಾರ್ ಹಾಗೂ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿ ಕೆ.ಸಿ. ಸೌಮ್ಯ ಅವರ ನೇತೃತ್ವದಲ್ಲಿ ಗುರುವಾರ ಅಧಿಕಾರಿಗಳ ಸಭೆ ನಡೆಯಿತು.

ಪಟ್ಟಣದಲ್ಲಿ ಸುಗಮ ವಾಹನ ಸಂಚಾರ ಹಾಗೂ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ರಸ್ತೆ ಬದಿ ಮತ್ತು ಪಾದಚಾರಿ ಮಾರ್ಗಗಳಲ್ಲಿರುವ ಅತಿಕ್ರಮಣಗಳನ್ನು ತೆರವುಗೊಳಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಸಾರ್ವಜನಿಕ ರಸ್ತೆ ಹಾಗೂ ಪಾದಚಾರಿ ಮಾರ್ಗಗಳನ್ನು ಮುಕ್ತಗೊಳಿಸಿ ಶೀಘ್ರದಲ್ಲೇ ತೆರವು ಕಾರ್ಯಾಚರಣೆ ಆರಂಭಿಸುವ ಕುರಿತು ಅಧಿಕಾರಿಗಳು ಚರ್ಚಿಸಿದರು.

ರಸ್ತೆ ಬದಿ, ಪಾದಚಾರಿ ಮಾರ್ಗ ಹಾಗೂ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಿಸಿಕೊಂಡಿರುವ ಶೆಡ್‌ಗಳು, ಗೂಡಂಗಡಿಗಳು ಮತ್ತು ಅಂಗಡಿಗಳನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಹಸೀಲ್ದಾರ್ ಕೆ.ಸಿ.ಸೌಮ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



**ಪ್ರಮುಖ ಸ್ಥಳಗಳಲ್ಲಿ ತೆರವು**

ಪಟ್ಟಣದ ಅನಕೃ ವೃತ್ತ, ಸಾರ್ವಜನಿಕ ಆಸ್ಪತ್ರೆ ಮುಂಭಾಗ, ಹಳೆಯ ಬಸ್ ನಿಲ್ದಾಣ, ಕುವೆಂಪು ಪಾರ್ಕ್ ಮುಂಭಾಗ, ದೊಡ್ಡಮ್ಮ ವೃತ್ತ, ನಂಜೇಗೌಡ ವೃತ್ತ ಹಾಗೂ ಸಂತೆಮರೂರು ವೃತ್ತ ಸೇರಿದಂತೆ ಪ್ರಮುಖ ಪ್ರದೇಶಗಳಲ್ಲಿ ಅತಿಕ್ರಮಣ ತೆರವು ಕಾರ್ಯ ಕೈಗೊಳ್ಳಲು ಸಭೆಯಲ್ಲಿ ನಿರ್ಧರಿಸಲಾಯಿತು.

ವಿಶೇಷವಾಗಿ ಅನಕೃ ವೃತ್ತದಲ್ಲಿ ಹಲವು ಪ್ರಮುಖ ಕಚೇರಿಗಳು ಹಾಗೂ ರಸ್ತೆಗಳು ಸೇರುವುದರಿಂದ ವಾಹನ ಮತ್ತು ಜನದಟ್ಟಣೆ ಹೆಚ್ಚಾಗಿದೆ. ರಸ್ತೆ ಬದಿಯಲ್ಲಿ ವ್ಯಾಪಾರ ನಡೆಸುತ್ತಿರುವ ಅಂಗಡಿಗಳು ಹಾಗೂ ಶೆಡ್‌ಗಳಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಯನ್ನು ನಿವಾರಿಸುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು.

**ಇಂದಿರಾ ಕ್ಯಾಂಟೀನ್ ದಾರಿ ಮುಕ್ತ**

ಪಟ್ಟಣದ ಇಂದಿರಾ ಕ್ಯಾಂಟೀನ್‌ಗೆ ತೆರಳುವ ಮಾರ್ಗವು ಪಾನಿಪೂರಿ, ಗೋಬಿ, ಹಣ್ಣು-ತರಕಾರಿ ಹಾಗೂ ಇತರೆ ವ್ಯಾಪಾರಿಗಳ ಶೆಡ್‌ಗಳಿಂದ ಬಹುತೇಕ ಮುಚ್ಚಿಹೋಗಿರುವ ವಿಚಾರವೂ ಸಭೆಯಲ್ಲಿ ಪ್ರಸ್ತಾಪವಾಯಿತು. ಇದರಿಂದ ಸಾರ್ವಜನಿಕರು ಕ್ಯಾಂಟೀನ್‌ಗೆ ತೆರಳಲು ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ದಾರಿಯನ್ನು ಮುಕ್ತಗೊಳಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಅದೇ ರೀತಿ ಬಸ್ ನಿಲ್ದಾಣದ ಮುಂಭಾಗದಲ್ಲಿ ಪ್ಲಾಸ್ಟಿಕ್ ಹಾಗೂ ಟಾರ್ಪಲ್ ಬಳಸಿ ನಿರ್ಮಿಸಿರುವ ಅನಧಿಕೃತ ಶೆಡ್‌ಗಳಿಂದ ವಾಹನ ಸಂಚಾರ ಮತ್ತು ಸಾರ್ವಜನಿಕರ ಓಡಾಟಕ್ಕೆ ಉಂಟಾಗುತ್ತಿರುವ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಯಿತು.

> **ಕಾರ್ಯಾಚರಣೆಗೆ ಸಾರ್ವಜನಿಕರ ಬೆಂಬಲ**
>
> ರಸ್ತೆ ಬದಿ ಹಾಗೂ ಪಾದಚಾರಿ ಮಾರ್ಗಗಳ ಅತಿಕ್ರಮಣದಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಕುರಿತು ಪ್ರಜೋದಯ ಪತ್ರಿಕೆಯಲ್ಲಿ ಆ.10 ರಂದು ಸುದ್ದಿ ಪ್ರಕಟವಾದ ನಂತರ ತಾಲೂಕು ಆಡಳಿತ ಅಧಿಕಾರಿಗಳ ಸಭೆ ನಡೆಸಿ ತೆರವು ಕಾರ್ಯಾಚರಣೆಗೆ ಮುಂದಾಗಿರುವುದು ಗಮನಾರ್ಹವಾಗಿದೆ.
>
> ಇದೀಗ ಸಭೆಯಲ್ಲಿ ಕೈಗೊಂಡಿರುವ ನಿರ್ಧಾರಗಳು ಕೇವಲ ಸಭೆಗೆ ಸೀಮಿತವಾಗದೆ, ಅನಧಿಕೃತ ಶೆಡ್‌ಗಳು ಹಾಗೂ ಅತಿಕ್ರಮಣಗಳ ವಿರುದ್ಧ ಸ್ಥಳದಲ್ಲೇ ಕಾರ್ಯಾಚರಣೆಯಾಗಿ ಜಾರಿಯಾಗಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

**ನೋಟಿಸ್ ನೀಡಿ ತೆರವು**

ಪರವಾನಗಿ ಪಡೆಯದೆ ವಾಣಿಜ್ಯ ಮಳಿಗೆಗಳ ಮುಂಭಾಗದಲ್ಲಿ ಶೆಡ್ ನಿರ್ಮಿಸಿಕೊಂಡಿರುವವರಿಗೆ ಮೊದಲು ನೋಟಿಸ್ ನೀಡಿ, ನಿಯಮಾನುಸಾರ ತೆರವುಗೊಳಿಸುವ ಕ್ರಮ ಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. ತೆರವು ಕಾರ್ಯಾಚರಣೆಯ ಕುರಿತು ಪಟ್ಟಣ ಪಂಚಾಯಿತಿ ವಾಹನಗಳ ಮೂಲಕ ಸಾರ್ವಜನಿಕರಿಗೆ ತಿಳುವಳಿಕೆ ನೀಡಲು ಕೂಡ ನಿರ್ಧರಿಸಲಾಯಿತು.

ಇದರೊಂದಿಗೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿರುವ ರಾಜ್ಯ ಹೆದ್ದಾರಿ ಹಾಗೂ ಸಂಪರ್ಕ ರಸ್ತೆಗಳ ಗಡಿ ಗುರುತು ಮಾಡುವ ಬಗ್ಗೆಯೂ ಅಧಿಕಾರಿಗಳು ಚರ್ಚಿಸಿದರು. ರಸ್ತೆ ಮತ್ತು ಪಾದಚಾರಿ ಮಾರ್ಗದ ನಿಖರ ಗಡಿ ಗುರುತಿಸಿದ ಬಳಿಕ ಅತಿಕ್ರಮಣ ತೆರವು ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲು ಸಾಧ್ಯವಾಗಲಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟರು.

**ಅಧಿಕಾರಿಗಳ ಸಭೆ**

ಸಭೆಯಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಾಗೇಂದ್ರಕುಮಾರ್, ಆರೋಗ್ಯ ನಿರೀಕ್ಷಕ ಚೇತನ್, ಪಿಎಸ್‌ಐ ಕಾವ್ಯ, ಪಿಡಬ್ಲ್ಯುಡಿ ಎಂಜಿನಿಯರ್ ಸಾಗರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಪಟ್ಟಣದಲ್ಲಿ ಅನಧಿಕೃತ ಶೆಡ್‌ಗಳು ಹಾಗೂ ರಸ್ತೆ ಅತಿಕ್ರಮಣದ ಕುರಿತು ನಿರಂತರವಾಗಿ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿದ್ದ ಹಿನ್ನೆಲೆಯಲ್ಲಿ ಇದೀಗ ಸಾರ್ವಜನಿಕರಿಂದಲೂ ನಿರೀಕ್ಷೆ ವ್ಯಕ್ತವಾಗಿದೆ.

## ವಿದ್ಯುತ್ ವ್ಯತ್ಯಯ

**ಹಾಸನ:** ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ. ವಿ.ವಿ ಕೇಂದ್ರ ನಗರ್ತಿ ದೊಡ್ಡಕಾಡನೂರು ಮತ್ತು ದೊಡ್ಡಹಳ್ಳಿಯಲ್ಲಿ ಎರಡನೇ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ನಿರ್ವಹಿಸಬೇಕಾಗಿರುವುದರಿಂದ ನಗರ್ತಿ ವಿ.ವಿ.ಕೇಂದ್ರ ವ್ಯಾಪ್ತಿಯ ಗ್ರಾಮಗಳಾದ, ದೇವರ ಮುದ್ದೇನಹಳ್ಳಿ, ಶ್ರವಣೂರು, ಹಾವಿನ ಮಾರಹಳ್ಳಿ, ದೇವಿಪುರ, ಕೋಡಿಹಳ್ಳಿ, ಕಡವಿನ ಬಾಚಹಳ್ಳಿ, ದೊಡ್ಡಕಾಡನೂರು ಶಾಖಾ ವ್ಯಾಪ್ತಿಯ ಗ್ರಾಮಗಳಾದ ದೊಡ್ಡಕಾಡನೂರು, ಸಿ.ಹಿಂದಲಹಳ್ಳಿ, ಹಿರಿತಳಾಲು, ಬಾಚಹಳ್ಳಿ, ಕಬ್ಬೂರು, ಕಲ್ಲೊಡೆ ಬೋರೆಕಾವಲ್, ದಾಳಗೌಡನಹಳ್ಳಿ, ನಗರನಹಳ್ಳಿ, ರಂಗೇನಹಳ್ಳಿ, ಮರಹಳ್ಳಿ, ದೊಡ್ಡಹಳ್ಳಿ ವಿ.ವಿ.ಕೇಂದ್ರ ವ್ಯಾಪ್ತಿಯ ಸಂತೆಮ್ಮೆದಾನ, ರಾಗಿಹಳ್ಳಿಕಾವಲು, ಚೌಡಸಮುದ್ರ, ಬೀಕನಹಳ್ಳಿ, ಆಲೇನಹಳ್ಳಿ, ಮುಂಜನಹಳ್ಳಿ, ಗುಳವಿನಅತ್ತಿಗುಪ್ಪೆ, ಅರೆಕೆರೆ, ಯಡೆಗೌಡನಹಳ್ಳಿ, ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆ.14 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ರ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹೊಳೆನರಸೀಪುರ ನೋಡಲ್ ಕೇಂದ್ರದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ರಾಜ್ಯದಲ್ಲಿಂದು ಸಾಧಾರಣ ಮಳೆ

• ಪ್ರಜೋದಯ ವರದಿ

**ಬೆಂಗಳೂರು:** ಕರ್ನಾಟಕದ ಕರಾವಳಿ, ಮಲೆನಾಡು, ದಕ್ಷಿಣ ಹಾಗೂ ಉತ್ತರ ಒಳನಾಡು ಸೇರಿದಂತೆ 20ಕ್ಕೂ ಅಧಿಕ ಜಿಲ್ಲೆಗಳಲ್ಲಿ ಮುಂದಿನ 24 ಗಂಟೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ.



ಭಾರತೀಯ ಹವಾಮಾನ ಇಲಾಖೆಯ ವರದಿ ಆಧರಿಸಿ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರವು ಮಳೆ ಮಾಹಿತಿಯನ್ನು ಬಿಡುಗಡೆ ಮಾಡಿದೆ.ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಬಹುತೇಕ ಕಡೆಗಳಲ್ಲಿ ಸಾಧಾರಣ ಗಾಳಿಯೊಂದಿಗೆ (ಗಂಟೆಗೆ 30-40 ಕಿ.ಮೀ ವೇಗ) ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡು ಕರ್ನಾಟಕದ ಬಾಗಲಕೋಟೆ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳ ಕೆಲವು ಕಡೆಗಳಲ್ಲಿ (ಗಂಟೆಗೆ 40-50 ಕಿ.ಮೀ ವೇಗದ) ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ದಕ್ಷಿಣ ಒಳನಾಡು ಕರ್ನಾಟಕ ಮತ್ತು ಮಲೆನಾಡು ಬಳ್ಳಾರಿ, ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ಬೆಂಗಳೂರು ದಕ್ಷಿಣ, ಶಿವಮೊಗ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳ ಕೆಲವು ಕಡೆಗಳಲ್ಲಿ (ಗಂಟೆಗೆ 40-50 ಕಿ.ಮೀ ವೇಗದ) ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಕೆಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಲಾಗಿದೆ.

## ಕೆ.ಎಂ.ಶಿ.ಗೆ ಅಬಕಾರಿ ಖಾತೆ: ಮುಖಂಡರ ಸಂತಸ

### ಯಶಸ್ವಿಯಾಗಿ ನಿಭಾಯಿಸುವ ವಿಶ್ವಾಸದಲ್ಲಿ ಕಾಂಗ್ರೆಸ್

• ಪ್ರಜೋದಯ ವರದಿ

**ಅರಸೀಕೆರೆ:** ರಾಜ್ಯ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ಕೆ.ಎಂ. ಶಿವಲಿಂಗೇಗೌಡ ಅವರಿಗೆ ಅಬಕಾರಿ ಖಾತೆ ನೀಡುವುದನ್ನು ತಾಲ್ಲೂಕು ಕಾಂಗ್ರೆಸ್ ಮುಖಂಡರು ಸ್ವಾಗತಿಸಿದರಲ್ಲದೆ, ಸಂತಸವನ್ನೂ ವ್ಯಕ್ತಪಡಿಸಿದರು.



ಸುದ್ದಿಗೋಷ್ಠಿಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ಜೀಪಂ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ ಹಾಗೂ ನಗರಸಭೆಯ ನಿಕಟ ಪೂರ್ವ ಅಧ್ಯಕ್ಷ ಎಂ. ಸಮಿವುಲ್ಲಾ ಅವರು ಮಾತನಾಡಿ, ಕೆ.ಎಂ.ಶಿವಲಿಂಗೇಗೌಡ ಅವರು ಅಪೇಕ್ಷಿತ ಸಚಿವ ಸ್ಥಾನ ದೊರೆಯದಿದ್ದರೂ ಮುಖ್ಯಮಂತ್ರಿಗಳು ಭರವಸೆ ಇಟ್ಟು ನೀಡಿರುವ ಅಬಕಾರಿ ಖಾತೆಯನ್ನೇ ಯಶಸ್ವಿಯಾಗಿ ನಿಭಾಯಿಸುವುದರಲ್ಲಿ ಸಂದೇಹವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶ್ರೀನಿವಾಸ್ ಅವರು ಮಾತನಾಡಿ, ಮೊದಲ ಬಾರಿಗೆ ಅರಸೀಕೆರೆ ವಿಧಾನ ಸಭಾ ಕ್ಷೇತ್ರದಿಂದ ಆಯ್ಕೆಯಾದ ಶಾಸಕರು ಸಚಿವರಾಗಿದ್ದು, ಇದಕ್ಕೆ ಸಹಕಾರ ನೀಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಾಗೂ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸೇರಿದಂತೆ ಕಾಂಗ್ರೆಸ್ ಹೈಕಮಾಂಡ್‌ಗೆ ತಾಲ್ಲೂಕಿನ ಜನತೆ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

ಜಿಪಂ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ ಮಾತನಾಡಿ, ಶಾಸಕರಾಗಿ ಶಿವಲಿಂಗೇಗೌಡ ಅವರು ತಮ್ಮ ಕ್ಷೇತ್ರದಲ್ಲಿ ಮಾಡಿರುವ ಜನಪರ ಕೆಲಸ ಕಾರ್ಯಗಳನ್ನು ಗುರುತಿಸಿ ಕಾಂಗ್ರೆಸ್ ನಾಯಕರು ಅವರನ್ನ ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿದ್ದರು. ಅಲ್ಲದೆ ಪಕ್ಷಕ್ಕೆ ಸೇರಿಸಿಕೊಳ್ಳುವ ಸಂದರ್ಭದಲ್ಲಿ ನೀಡಿದ್ದ ಭರವಸೆಯಂತೆ ಸಚಿವ ಸ್ಥಾನ ನೀಡಿರುವುದು ಸ್ವಾಗತಾರ್ಹವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಸಚಿವ ಸ್ಥಾನಕ್ಕಾಗಿ ಕೆ.ಎಂ. ಶಿವಲಿಂಗೇಗೌಡ ಅವರು ಲಾಬಿ ಮಾಡಲಿಲ್ಲ, ಸರ್ಕಾರ ತಮಗೆ ನೀಡುವ ಯಾವುದೇ ಖಾತೆಯನ್ನಾದರೂ ಸ್ವೀಕರಿಸಿ ಜನರ ಸೇವೆ ಮಾಡುವುದಾಗಿ ಈಗಾಗಲೇ ಹೇಳಿದ್ದರು. ಅವರಿಗೆ ಕೃಷಿ ನೀರಾವರಿ ಅಥವಾ ವಸತಿ ಖಾತೆ ಸಿಕ್ಕಿದ್ದರೆ ಚೆನ್ನಾಗಿರುತ್ತಿತ್ತು, ಆದರೂ ಅಬಕಾರಿ ಖಾತೆ ಕೂಡ ದೊಡ್ಡ ಜವಾಬ್ದಾರಿ ಆಗಿದ್ದು ನಮ್ಮ ನಾಯಕರು ಅಬಕಾರಿ ಇಲಾಖೆಯಲ್ಲಿ ನಡೆಯುವ ಅಕ್ರಮ ಮದ್ಯ ಮಾರಾಟ ಕಳಪೆ ಮದ್ಯ ಮಾರಾಟದ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವ ಮೂಲಕ ನಾಡಿನ ಜನ ಒಪ್ಪುವಂತೆ ಕೆಲಸ ಮಾಡುವುದರಲ್ಲಿ ಸಂದೇಹವಿಲ್ಲ ಎಂದು ಆಶಿಸಿದರು.

ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಗಂಜಿಗೆರೆ ಚಂದ್ರಶೇಖರ್, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಉಮೇಶ್, ನಗರಸಭೆ ಮಾಜಿ ಸದಸ್ಯ ವೆಂಕಟಮುನಿ, ಜಿಲ್ಲಾ ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ ವೆಂಕಟೇಶ, ಮದರ ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸುಬ್ರಮಣ್ಯ ಬಾಬು, ಬಾಲಮುರುಗನ್ ಇನ್ನಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಶಾಂತಿಯುತ ಗಣೇಶೋತ್ಸವಕ್ಕೆ ನಿರ್ಧಾರ



**ಸಕಲೇಶಪುರ:** ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗು ವಿಸರ್ಜನಾ ಕಾರ್ಯಕ್ರಮಗಳನ್ನು ಯಾವ ಗೊಂದಲವಿಲ್ಲದೆ ಅಚ್ಚುಕಟ್ಟಾಗಿ ನಡೆಸುವ ನಿಟ್ಟಿನಲ್ಲಿ ಎಲ್ಲಾ ಗಣಪತಿ ಸಮಿತಿಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕೆಂದು ರಾಮದೂತ ಹಿಂದೂ ಮಹಾಗಣಪತಿ ಸಮಿತಿ ಹಾಗು ಸಕಲೇಶಪುರ ಗಣಪತಿ ಸಮಿತಿ ಒಕ್ಕೂಟದ ವತಿಯಿಂದ ನಡೆದ ಸಲಹಾ ಸಭೆಯಲ್ಲಿ ನಿರ್ಧರಿಸಲಾಯಿತು.

ಪಟ್ಟಣದ ಲಯನ್ಸ್ ಹಾಲ್‌ನಲ್ಲಿ ಗುರುವಾರ ನಡೆದ ಸಭೆಯಲ್ಲಿ ಪಟ್ಟಣ ಹಾಗು ಸುತ್ತಲಿನ ಗ್ರಾಮಗಳ 35ಕ್ಕೂ ಹೆಚ್ಚು ಗಣಪತಿ ಪ್ರತಿಷ್ಟಾಪನಾ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳು ಹಾಗು ಸದಸ್ಯರು ಭಾಗವಹಿಸಿ ವಿವಿಧ ಸಲಹೆ ಹಾಗು ಸೂಚನೆ ನೀಡಿದರು.

ರಾಮದೂತ ಹಿಂದೂ ಮಹಾಗಣಪತಿ ಸಮಿತಿಯ ಕಾರ್ಯಕರ್ತ ರಘು ಅವರು ಮಾತನಾಡಿ, ಗಣಪತಿ ಪ್ರತಿಷ್ಠಾಪನೆ ಹಾಗು ವಿವಿಧ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಮತ್ತು ಕಡಿಮೆ ಅವಧಿಯಲ್ಲಿ ನಡೆಸುವ ಮೂಲಕ ಹಿಂದೂ ಸಂಸ್ಕೃತಿ ಹಾಗು ಪರಂಪರೆಯನ್ನು ಬಿಂಬಿಸಬೇಕು. ವಿಸರ್ಜನಾ ಸಂದರ್ಭದಲ್ಲಿ ಪೊಲೀಸ್ ಇಲಾಖೆ ನೀಡುವ ಸೂಚನೆಗಳನ್ನು ಸಮಿತಿಗಳು ಕಡ್ಡಾಯವಾಗಿ ಪಾಲಿಸಬೇಕೆಂದರು.

ಟೌನ್ ಹಾಲ್ ಗಣಪತಿ ಸಮಿತಿಯ ಅಧ್ಯಕ್ಷ ಸತೀಶ್ ಮಾತನಾಡಿ, ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಿದರೆ ಸಮಸ್ಯೆಗಳನ್ನು ಪರಸ್ಪರ ಚರ್ಚೆಯ ಮೂಲಕ ಪರಿಹರಿಸಿಕೊಳ್ಳಬಹುದು ಎಂದರು.

ರಾಮದೂತ ಹಿಂದೂ ಮಹಾಗಣಪತಿ ಸಮಿತಿಯ ಕಾರ್ಯದರ್ಶಿ ಮಂಜುನಾಥ್ ಇನ್ನಿತರರಿದ್ದರು.

## ಹಸಿರು ಹಾಸನ ನಿರ್ಮಾಣಕ್ಕೆ ಸಹಕರಿಸಿ

• ಪ್ರಜೋದಯ ವರದಿ

### 5 ರಿಂದ 10 ಲಕ್ಷ ಸಸಿ ನೆಡುವ ಗುರಿ

**ಹಾಸನ:** ಹಸಿರು ಹಾಸನ ನಿರ್ಮಾಣ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ 5 ರಿಂದ 10 ಲಕ್ಷ ಸಸಿಗಳನ್ನು ನೆಡುವ ಗುರಿ ಹೊಂದಿದ್ದು, ಜಿಲ್ಲಾಡಳಿತದ ಜೊತೆಗೆ ಹಲವಾರು ಸಂಘ ಸಂಸ್ಥೆಗಳು ಗಿಡಗಳನ್ನು ನೆಡುವ ಮೂಲಕ ಸಹಕಾರ ನೀಡುತ್ತಿದೆ, ಇದು ಅತ್ಯಂತ ಸಂತೋಷದ ಸಂಗತಿ ಎಂದು ಜಿಲ್ಲಾಧಿಕಾರಿ ಲತಾಕುಮಾರಿ ಅವರು ತಿಳಿಸಿದ್ದಾರೆ.

ನಮ್ಮ ಹಾಸನ ಟಿವಿ ಮತ್ತು ಸಂಗಡಿಗರಿಂದ ಗುರುವಾರ ಆಯೋಜಿಸಿದ್ದ ನಗರದ ಬಿ.ಎಂ. ರಸ್ತೆಯ ಮಧ್ಯದಲ್ಲಿ ಹೂವಿನ ಗಿಡಗಳನ್ನು ನೆಡುವ ಕಾರ್ಯಕ್ರಮವನ್ನು ಗಿಡ ನೆಡುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಮಾನ್ಯ ಶರೀಫ್ ಖಾನ್ ಹಾಗೂ ಸಾಲುಮರದ ತಿಮ್ಮಕ್ಕ ಅವರ ನೆನಪಿಗಾಗಿ ನಗರದ ಬಿ.ಎಂ.ರಸ್ತೆಯ ಮಧ್ಯೆ ಭಾಗದಲ್ಲಿ ಹೂವಿನ ಗಿಡಗಳನ್ನು ಬೆಳೆಸುವ ಮೂಲಕ ನಗರವನ್ನು ಸುಂದರೀಕರಣಗೊಳಿಸಲು ನಮ್ಮ ಹಾಸನ ಟಿವಿ ಮತ್ತು ಸಂಗಡಿಗರು ಮುಂದಾಗಿರುವುದು ಸಂತಸದ ವಿಷಯ ಎಂದು ಅವರು ತಿಳಿಸಿದರು.



ಮರಗಿಡಗಳನ್ನು ಹೆಚ್ಚು ಹೆಚ್ಚು ಬೆಳೆಸುವುದರಿಂದ ಆಮ್ಲಜನಕವನ್ನು ಪಡೆಯಲು ಅನುಕೂಲವಾಗುತ್ತದೆ ಜೊತೆಗೆ ಪರಿಸರ ಮತ್ತು ನಗರವನ್ನು ಸ್ವಚ್ಛವಾಗಿಡುವ ಮೂಲಕ ಸುಂದರ ಜೀವನಕ್ಕೆ ನಾಂದಿಯಾಗುತ್ತದೆ ಎಂದು ತಿಳಿಸಿದರು.

ನಗರದ ಇನ್ನಿತರೆ ಕಡೆಗಳಲ್ಲಿಯೂ ಸಹ ಹಣ್ಣಿನ ಗಿಡಗಳು ಹಾಗೂ ಹೂವಿನ ಗಿಡಗಳನ್ನು ನೆಡುವ ಮೂಲಕ ಹಾಸನವನ್ನು ಹಸಿರು ಹಾಸನ ಮಾಡಲು ಮುಂದಾಗಿರುವ ಎಲ್ಲರಿಗೂ ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಜಿಲ್ಲಾ ಪಂಚಾಯಿತಿ ಕಡೆಯಿಂದ ಅವರು ಧನ್ಯವಾದಗಳನ್ನು ತಿಳಿಸಿದರು.

ನಮ್ಮ ಹಾಸನ ಟಿವಿ ಸಂಪಾದಕ ತೌಫೀಕ್ ಅಹಮದ್, ಸಮಾಜ ಸೇವಕ ಅಜಂ ಖಾನ್, ಪ್ಲಾಂಟರ್ ಅಸೋಶಿಯೇಶನ್‌ನ ಅಧ್ಯಕ್ಷ ಸಲ್ಮಾನ್ ಬಶೀರ್ ಹಾಗೂ ಮತ್ತಿತರರು ಹಾಜರಿದ್ದರು.

## ಪ್ರೇಮದ ಅತ್ಯುನ್ನತ ಉತ್ಕಟಿತ ಭಾವವೇ ಭಕ್ತಿ

• ಪ್ರಜೋದಯ ವರದಿ

**ಹಾಸನ:** ಪ್ರೇಮದ ಅತ್ಯುನ್ನತ ಮತ್ತು ಉತ್ಕಟಿತ ಭಾವವೇ ಭಕ್ತಿಯಾಗಿದೆ. ಮಾನವನ ಅಂತರಂಗವನ್ನು ಶುದ್ಧೀಕರಿಸುವ ಶಕ್ತಿಯು ಭಕ್ತಿ ಮತ್ತು ಯೋಗ ಮಾರ್ಗಗಳಿಗಿದೆ ಎಂದು ಲೇಖಕ ಗೊರೂರು ಶಿವೇಶ್ ಅವರು ಅಭಿಪ್ರಾಯಪಟ್ಟರು.

ನಗರದ ವಿವೇಕಾನಂದ ಯೋಗ ಶಿಕ್ಷಣ ಶಾಲೆಯಲ್ಲಿ ಆಯೋಜಿಸಲಾಗಿದ್ದ ಕುಂಡಲಿನಿ ಯೋಗ ಹಾಗೂ ಭಕ್ತಿ ಯೋಗದ ಅನುಸಂಧಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕುಂಡಲಿನಿ ಯೋಗ ಹಾಗೂ ಭಕ್ತಿ ಯೋಗದ ನಿಕಟ ಬಾಂಧವ್ಯವನ್ನು ವಿವರಿಸಿದ ಅವರು, ಕುಂಡಲಿನಿ ಯೋಗದಲ್ಲಿ ಮೂಲಾಧಾರ, ಸ್ವಾಧಿಷ್ಠಾನ, ಮಣಿಪೂರ, ಅನಾಹತ, ವಿಶುದ್ಧ, ಆಜ್ಞಾ ಹಾಗೂ ಸಹಸ್ರಾರ ಎಂಬ ಸಪ್ತ ಚಕ್ರಗಳಿರುವಂತೆ, ಭಕ್ತಿ ಯೋಗದಲ್ಲಿ ಶ್ರವಣ, ಕೀರ್ತನ, ಸ್ಮರಣ, ಪಾದಸೇವನ, ಅರ್ಚನ, ವಂದನ, ದಾಸ್ಯ, ಸಖ್ಯ ಮತ್ತು ಆತ್ಮನಿವೇದನ ಎಂಬ ನವವಿಧ ಭಕ್ತಿಯ ಹಂತಗಳಿವೆ ಎಂದರು.





ಈ ಪ್ರಕ್ರಿಯೆಗಳನ್ನು 'ರಾಗ ಯೋಗ'ದ ಮೂಲಕ ಸಂಯೋಜಿಸಿ ಅನುಸಂಧಾನಗೊಳಿಸಿದಾಗ, ಮಾನವ ದೇಹವು ದೈಹಿಕ, ಮಾನಸಿಕ, ಆಧ್ಯಾತ್ಮಿಕ ಹಾಗೂ ನೈತಿಕವಾಗಿ ಪರಿಪೂರ್ಣ ನೆಮ್ಮದಿಯ ಸ್ಥಿತಿಯನ್ನು ತಲುಪಲು ಸಾಧ್ಯವಾಗುತ್ತದೆ. 'ದಾಸ ಪದ' ಎಂದರೆ ಅಹಂಕಾರವನ್ನು ತೊರೆದು ದೇವರಿಗೆ ಸಂಪೂರ್ಣ ಶರಣಾಗುವ ಸ್ಥಿತಿ. ದಾಸ್ಯ ಮನೋಭಾವವು ಕರಗಿ, ಭಕ್ತನು ದೇವರ ಸಾಮೀಪ್ಯಕ್ಕೆ ತಲುಪಿ ಆತ್ಮನಿವೇದನೆಗೆ ಹಾದಿಮಾಡಿಕೊಡುತ್ತದೆ ಎಂದು ಶಕ್ತಿಚಕ್ರಗಳ ಅನುಸಂಧಾನ ಕ್ರಿಯೆಯ ಗೂಢಾರ್ಥವನ್ನು ಬಿಚ್ಚಿಟ್ಟರು.

ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಹಿರಿಯ ಉಪನ್ಯಾಸಕ ಸಿ.ಕೆ.ಹರೀಶ್ ಅವರು, ಕರ್ನಾಟಕದ ಸಾಂಸ್ಕೃತಿಕ ಹಾಗೂ ಸಾಮಾಜಿಕ ಇತಿಹಾಸದಲ್ಲಿ ಭಕ್ತಿ ಪಂಥದ್ದು ಅತ್ಯಂತ ಪ್ರಮುಖ ಕಾಲಘಟ್ಟ. ಭಕ್ತ ಕನಕದಾಸರು ಮತ್ತು ಕರ್ನಾಟಕ ಸಂಗೀತ ಪಿತಾಮಹ ಪುರಂದರದಾಸರು ರಚಿಸಿದ ಕೀರ್ತನೆಗಳು ಇಂದಿಗೂ ಮನೆ ಮಾತಾಗಿವೆ. ಲೌಕಿಕ ಜೀವನದ ಜಂಜಾಟಗಳಿಂದ ಮುಕ್ತಿ ಪಡೆದು ಆಧ್ಯಾತ್ಮಿಕ ಪ್ರಪಂಚಕ್ಕೆ ಪ್ರವೇಶಿಸಲು ಈ ದಾಸ ಸಾಹಿತ್ಯವು ಸುಲಭ ಮಾರ್ಗದರ್ಶಿಯಾಗಿದೆ ಎಂದು ಅವರು ಬಣ್ಣಿಸಿದರು.

ಗಾಯಕ ಗೊರೂರು ಶ್ರೀಕಾಂತ್ ಅವರು ಕನಕದಾಸ ಹಾಗೂ ಪುರಂದರ ದಾಸರ ಜನಪ್ರಿಯ ಕೀರ್ತನೆಗಳನ್ನು ಹಾಗೂ ಭಕ್ತಿಗೀತೆಗಳನ್ನು ಸುಶ್ರಾವ್ಯವಾಗಿ ಹಾಡಿ ಪ್ರೇಕ್ಷಕರನ್ನು ಭಕ್ತಿರಸದಲ್ಲಿ ತೇಲಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಯೋಗ ಶಾಲೆಯ ಪರವಾಗಿ ಗಾಯಕ ಗೊರೂರು ಶ್ರೀಕಾಂತ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಯೋಗ ಶಾಲೆಯ ಹಿರಿಯ ಗುರುಗಳಾದ ಧರ್ಮಪ್ಪ, ಪುಟ್ಟಪ್ಪ, ಹಿರಿಯ ಶಿಕ್ಷಣಾರ್ಥಿಗಳಾದ ಅಣ್ಣಪ್ಪ ಶೆಟ್ಟಿ, ಸುರೇಶ, ನಾಗೇಶ್ ಉದ್ಯಮಿಗಳಾದ ರಾಜೇಶ್, ಪರಮೇಶ್ ಹಾಗೂ ಪ್ರಮುಖರಾದ ಸುಮನಾ, ರಮ್ಯ, ರುಕ್ಮಿಣಿ, ಜ್ಯೋತಿ, ಚಂದ್ರಕಲ, ಮಣಿ, ಕಲಾವತಿ, ಸ್ವಪ್ನ, ಪಂಕಜ, ತುಳಸಿ, ಪದ್ಮ, ಸುಷ್ಮಾ ಮತ್ತು ಯೋಗ ಶಾಲೆಯ ಇತರ ಶಿಕ್ಷಣಾರ್ಥಿಗಳು ಹಾಗೂ ಆಧ್ಯಾತ್ಮಾಸಕ್ತರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ಎಲ್.ಪಿ.ಜಿ ಗ್ರಾಹಕರಿಗೆ ಇ .ಕೆವೈಸಿ ಕಡ್ಡಾಯ

ಹಾಸನ: ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ಹಾಗೂ ತೈಲ ಮಾರುಕಟ್ಟೆ ಕಂಪನಿಗಳ ನಿರ್ದೇಶನದಂತೆ ಜಿಲ್ಲೆಯ ಎಲ್ಲಾ ಎಲ್.ಪಿ.ಜಿ ಗ್ರಾಹಕರು ಕಡ್ಡಾಯವಾಗಿ E-kyc ಪ್ರಕ್ರಿಯೆಯನ್ನು ಆ.15 ರೊಳಗೆ ಪೂರ್ಣಗೊಳಿಸುವಂತೆ ಮಾನ್ಯ ಆಯುಕ್ತರು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರುರವರ ಸೂಚನೆ ನೀಡಿದ್ದಾರೆ.

ಗ್ರಾಹಕರು ಸಂಬಂಧಪಟ್ಟ LPG ವಿತರಕರನ್ನು ಸಂಪರ್ಕಿಸಿಕೊಂಡು ಉಃಗ್ಗಇ ಕಾರ್ಯವನ್ನು ಪೂರ್ಣಗೊಳಿಸಿ ಕೊಳ್ಳುವಂತೆ ಡಿಸಿ ತಿಳಿಸಿದ್ದಾರೆ.

ಸಂಬಂಧಪಟ್ಟ ಗ್ಯಾಸ್ ವಿತರಕರನ್ನು ಸಂಪರ್ಕಿಸಿ ಬಯೋಮೆಟ್ರಿಕ್ ಆಧಾರ್ ದೃಢೀಕರಣ ಮಾಡಿಸುವ ಮೂಲಕ EKYC ಪೂರ್ಣಗೊಳಿಸುವುದು ಅಥವಾ ಸಂಬಂಧಪಟ್ಟ ಆಯಿಲ್ ಕಂಪನಿಯ MOBILE APP ಮೂಲಕ ಪೂರ್ಣಗೊಳಿಸಲು ಅವಕಾಶವಿದ್ದು, EKY ಗೆ ಯಾವುದೇ ಶುಲ್ಕವಿರುವುದಿಲ್ಲ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದರ್ಶನ್‌ಗೆ ಮತ್ತೆ ಹಿನ್ನಡೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪ್ರಮುಖ ಆರೋಪಿ ಆಗಿರುವ ನಟ ದರ್ಶನ್ ಅವರಿಗೆ ಕಾನೂನಿನ ಸಂಕಷ್ಟ ಹೆಚ್ಚುತ್ತಲೇ ಇದ್ದು, ಇನ್ನೋರ್ವ ಆರೋಪ ಪ್ರದೋಷ್ ಮಾಫಿ ಸಾಕ್ಷಿಯಾಗಲು ಮುಂದಾಗಿರುವುದರಿಂದ ದರ್ಶನ್ ಎದೆಯಲ್ಲಿ ಢವಢವ ಶುರುವಾಗಿದೆ. ಮಾಫಿ ಸಾಕ್ಷಿಗೆ ಆಕ್ಷೇಪಣೆ ಸಲ್ಲಿಸಲು ದರ್ಶನ್ ಹಾಗೂ ಇತರೆ ಆರೋಪಿಗಳಿಗೆ ಯಾವುದೇ ಹಕ್ಕು ಇಲ್ಲ ಎಂದು 59ನೇ ಸಿಸಿಹೆಚ್ ಕೋರ್ಟ್ ಆದೇಶ ನೀಡಿತ್ತು. ಅದನ್ನು ಪ್ರಶ್ನಿಸಿ ದರ್ಶನ್ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಅಲ್ಲಿ ಕೂಡ ಹಿನ್ನಡೆ ಆಗಿದೆ.

ದರ್ಶನ್ ಸಲ್ಲಿಸಿದ್ದ ಮೇಲ್ಮನವಿಯನ್ನು ಹೈಕೋರ್ಟ್ ವಜಾಗೊಳಿಸಿದೆ. ವಿನಯ್ ಕುಲಕರ್ಣಿ ಕೇಸ್‌ನಲ್ಲಿ ಈಗಾಗಲೇ ಈ ಅಂಶದ ತೀರ್ಮಾನವಾಗಿದೆ. ಹೈಕೋರ್ಟ್ ನೀಡಿದ ತೀರ್ಪನ್ನು ಸುಪ್ರೀಂಕೋರ್ಟ್ ಒಪ್ಪಿದೆ. ಹೀಗಾಗಿ 59ನೇ ಸಿಸಿಹೆಚ್ ಕೋರ್ಟ್ ಆದೇಶದಲ್ಲಿ ಮಧ್ಯ ಪ್ರವೇಶಿಸುವುದಿಲ್ಲ ಎಂದು ನ್ಯಾ. ಎಂ. ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಆದೇಶ ನೀಡಿದೆ.

ಮಾಫಿ ಸಾಕ್ಷಿಯನ್ನು ಆಕ್ಷೇಪಿಸಲು ಸಹ-ಆರೋಪಿಗೆ ಹಕ್ಕಿಲ್ಲ ಎಂದು ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದೆ.

### ವೈವಿಧ್ಯಮಯ ನಾಟಕಗಳ ಮೂಲಕ ಗಮನ ಸೆಳೆದ ಕಲಾವಿದರು

## ರಂಗಾಸಕ್ತರಿಗೆ ರಸದೌತಣ ನೀಡಿದ ಮೂರು ದಿನಗಳ ನಾಟಕೋತ್ಸವ

• ಪ್ರಜೋದಯ ವರದಿ

ಹಾಸನ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಾಸನದ ವಿವಿಧ ರಂಗಭೂಮಿ, ಸಾಮಾಜಿಕ ಮತ್ತು ಜಾನಪದ ಕಲಾ ಸಂಘಗಳ ಸಹಯೋಗದಲ್ಲಿ ಆ.10ರಿಂದ 12ರವರೆಗೆ ಆಯೋಜಿಸಿದ್ದ ಮೂರು ದಿನಗಳ ನಾಟಕೋತ್ಸವ ರಂಗಾಸಕ್ತರಿಗೆ ಕಲಾ ರಸದೌತಣ ನೀಡಿತು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಡೆದ ನಾಟಕೋತ್ಸವದಲ್ಲಿ ವಿವಿಧ ರಂಗತಂಡಗಳು ವಿಭಿನ್ನ ಕಥಾವಸ್ತುಗಳನ್ನೊಳಗೊಂಡ ನಾಟಕಗಳನ್ನು ಪ್ರದರ್ಶಿಸುವ ಮೂಲಕ ಪ್ರೇಕ್ಷಕರ ಮನಸೂರೆಗೊಂಡವು. ಸಾಮಾಜಿಕ ಬದುಕಿನ ವಾಸ್ತವತೆ, ಮಾನವೀಯ ಸಂಬಂಧಗಳು, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಕಳಕಳಿ ಹಾಗೂ ಜೀವನಾನುಭವಗಳನ್ನು ಬಿಂಬಿಸಿದ ನಾಟಕಗಳು ಪ್ರೇಕ್ಷಕರನ್ನು ನಗೆ, ಭಾವುಕತೆ ಹಾಗೂ ಚಿಂತನೆಯ ಲೋಕಕ್ಕೆ ಕರೆದೊಯ್ದವು.

ಮೂರು ದಿನಗಳ ಕಾಲ ಕಲಾಕ್ಷೇತ್ರದಲ್ಲಿ ರಂಗಕಲೆಯ ವಾತಾವರಣ ನಿರ್ಮಾಣವಾಗಿದ್ದು, ಹಿರಿಯ ರಂಗ ಕಲಾವಿದರ ಅನುಭವ ಮತ್ತು ಯುವ ಕಲಾವಿದರ ಉತ್ಸಾಹ ಒಂದಾಗಿ ವೇದಿಕೆಯಲ್ಲಿ ವಿಭಿನ್ನ ಪ್ರಯೋಗಗಳಿಗೆ ಸಾಕ್ಷಿಯಾಯಿತು. ಕಲಾವಿದರ ಅಭಿನಯ, ನಿರ್ದೇಶನ, ಸಂಭಾಷಣೆ, ರಂಗಸಜ್ಜಿಕೆ, ಬೆಳಕು ಮತ್ತು ಸಂಗೀತ ಪ್ರೇಕ್ಷಕರ ಮೆಚ್ಚುಗೆ ಗಳಿಸಿತು.



ನಾಟಕೋತ್ಸವವು ಕೇವಲ ಮನರಂಜನೆಗೆ ಸೀಮಿತವಾಗದೆ, ಸಮಾಜದ ಸಮಸ್ಯೆಗಳು, ಸಂಬಂಧಗಳ ಸೂಕ್ಷ್ಮತೆ ಹಾಗೂ ಬದುಕಿನ ಮೌಲ್ಯಗಳನ್ನು ರಂಗಭೂಮಿಯ ಮೂಲಕ ಪ್ರೇಕ್ಷಕರ ಮುಂದೆ ಪರಿಣಾಮಕಾರಿಯಾಗಿ ತೆರೆದಿಟ್ಟಿತು. ಹಲವು ನಾಟಕಗಳು ಪ್ರೇಕ್ಷಕರನ್ನು ನಗಿಸುವುದರ ಜೊತೆಗೆ ಗಂಭೀರವಾಗಿ ಚಿಂತಿಸುವಂತೆ ಮಾಡಿದವು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ರಂಗಾಸಕ್ತರು ಮೂರು ದಿನಗಳ ನಾಟಕಗಳನ್ನು ಆಸಕ್ತಿಯಿಂದ ವೀಕ್ಷಿಸಿ ಕಲಾವಿದರಿಗೆ ಪ್ರೋತ್ಸಾಹ ನೀಡಿದರು. ಕಲಾವಿದರ ಅಭಿನಯಕ್ಕೆ ಪ್ರೇಕ್ಷಕರಿಂದ ದೊರೆತ ಚಪ್ಪಾಳೆ ಮತ್ತು ಮೆಚ್ಚುಗೆ ನಾಟಕೋತ್ಸವದ ಯಶಸ್ಸಿಗೆ ಸಾಕ್ಷಿಯಾಯಿತು.

ಕನ್ನಡ ಸಾಹಿತ್ಯ, ರಂಗಭೂಮಿ, ಸಾಮಾಜಿಕ ಮತ್ತು ಜಾನಪದ ಕಲೆಯನ್ನು ಒಂದೇ ವೇದಿಕೆಯಲ್ಲಿ ಸಂಭ್ರಮಿಸುವ ಮೂಲಕ ಆಯೋಜಕರು ಹಾಸನದ ಸಾಂಸ್ಕೃತಿಕ ವಲಯಕ್ಕೆ ಹೊಸ ಚೈತನ್ಯ ತುಂಬಿದರು. ರಂಗಭೂಮಿಯ ಬೆಳವಣಿಗೆಗೆ ಇಂತಹ ನಿರಂತರ ಕಾರ್ಯಕ್ರಮಗಳು ಅಗತ್ಯವಾಗಿದ್ದು, ಜಿಲ್ಲೆಯ ಪ್ರತಿಭಾವಂತ ಕಲಾವಿದರಿಗೆ ಹೆಚ್ಚಿನ ಅವಕಾಶಗಳು ದೊರೆಯಬೇಕು ಎಂಬ ಅಭಿಪ್ರಾಯವೂ ರಂಗಾಸಕ್ತರಿಂದ ವ್ಯಕ್ತವಾಯಿತು.

ಆ.10ರ ಸಂಜೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಪ್ರದೀಪ್ ರಂಗಾಯಣ ಅವರ ನಿರ್ದೇಶನದಲ್ಲಿ ಪ್ರದರ್ಶನಗೊಂಡ ಸ್ಮಶಾನ ಕುರುಕ್ಷೇತ್ರ ನಾಟಕ ರಂಗಾಸಕ್ತರ ಗಮನ ಸೆಳೆಯಿತು. ಕುವೆಂಪು ಅವರ ಪ್ರಬಲ ಸಾಹಿತ್ಯಕ ಕೃತಿಯನ್ನು ರಂಗಭಾಷೆಗೆ ಅಳವಡಿಸಿಕೊಂಡು, ಯುದ್ಧ, ಅಧಿಕಾರ, ಮೌಲ್ಯಗಳ ಸಂಘರ್ಷ ಹಾಗೂ ಮಾನವೀಯತೆಯ ಪ್ರಶ್ನೆಗಳನ್ನು ಪರಿಣಾಮಕಾರಿಯಾಗಿ ಕಟ್ಟಿಕೊಟ್ಟ ನಾಟಕವು ಪ್ರೇಕ್ಷಕರನ್ನು ಚಿಂತನೆಗೆ ಹಚ್ಚಿತು. ಕಲಾವಿದರ ಮನೋಜ್ಞ ಅಭಿನಯ, ಪರಿಣಾಮಕಾರಿ ಸಂಭಾಷಣೆ, ರಂಗಸಜ್ಜಿಕೆ, ಬೆಳಕು ಹಾಗೂ ಸಂಗೀತ ನಾಟಕದ ಭಾವತೀವ್ರತೆಯನ್ನು ಮತ್ತಷ್ಟು ಹೆಚ್ಚಿಸಿತು. ಪ್ರದರ್ಶನದುದ್ದಕ್ಕೂ ಪ್ರೇಕ್ಷಕರನ್ನು ಹಿಡಿದಿಟ್ಟುಕೊಂಡ ನಾಟಕಕ್ಕೆ ಕೊನೆಯಲ್ಲಿ ರಂಗಾಸಕ್ತರಿಂದ ಮೆಚ್ಚುಗೆಯ ಚಪ್ಪಾಳೆ ವ್ಯಕ್ತವಾಯಿತು.

ಆ.11ರಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಮೈಸೂರಿನ ನಾಟ್ಯಲೇಖಾ ಕಲಾ ತಂಡದ ವತಿಯಿಂದ ಪ್ರದರ್ಶನಗೊಂಡ ಘಾಟಿ ನಾಟಕ ಸಮಕಾಲೀನ ಸಮಾಜದ ಹಲವು ಸೂಕ್ಷ್ಮ ವಿಚಾರಗಳನ್ನು ತೆರೆದಿಟ್ಟಿತು. ಇಂದಿನ ಯುವಕರ ರಾಜಕೀಯ ಲೆಕ್ಕಾಚಾರ, ಸ್ವಾರ್ಥದ ಬದುಕಿನ ನಡುವೆ ವೃದ್ಧ ತಂದೆಯ ಕಾಳಜಿ, ಕುಟುಂಬದ ಹೊಣೆಗಾರಿಕೆ ಹಾಗೂ ಕೊನೆಗೆ ಮಗಳೇ ಸಂಸಾರದ ನೊಗವನ್ನು ಹೊರಬೇಕಾದ ಅನಿವಾರ್ಯತೆಯನ್ನು ಕಥಾಹಂದರದ ಮೂಲಕ ಪರಿಣಾಮಕಾರಿಯಾಗಿ ಕಟ್ಟಿಕೊಡಲಾಯಿತು. ಯುವಜನರ ಮನಸ್ಥಿತಿ, ರಾಜಕೀಯದ ಪ್ರಭಾವ ಮತ್ತು ಕುಟುಂಬ ಸಂಬಂಧಗಳಲ್ಲಿನ ಬದಲಾವಣೆಗಳನ್ನು ಪ್ರೇಕ್ಷಕರ ಮುಂದಿಟ್ಟ ನಾಟಕವು ಕೇವಲ ಮನರಂಜನೆ ನೀಡದೆ, ಹೊಣೆಗಾರಿಕೆ ಯಾರದು? ಎಂಬ ಗಂಭೀರ ಪ್ರಶ್ನೆಯನ್ನು ಪ್ರೇಕ್ಷಕರಲ್ಲಿ ಮೂಡಿಸಿತು. ಕಲಾವಿದರ ಸಹಜ ಅಭಿನಯ, ಪರಿಣಾಮಕಾರಿ ಸಂಭಾಷಣೆ ಹಾಗೂ ನಿರ್ದೇಶನಕ್ಕೆ ಮೆಚ್ಚುಗೆ ವ್ಯಕ್ತವಾಯಿತು.

ಆ.12ರಂದು ಕೊಡವೂರುಉಡುಪಿಯ ಸುಮನಸಾ ಕಲಾ ತಂಡದ ವತಿಯಿಂದ ಪ್ರದರ್ಶನಗೊಂಡ ಈದಿ ನಾಟಕ ಮಾನವೀಯ ಬಾಂಧವ್ಯಗಳ ಮಹತ್ವವನ್ನು ಮನಮುಟ್ಟುವಂತೆ ತೆರೆದಿಟ್ಟಿತು. ಮನುಷ್ಯರ ನಡುವಿನ ಸಂಬಂಧ, ಪ್ರೀತಿ, ಕಾಳಜಿ, ನಂಬಿಕೆ ಹಾಗೂ ಪರಸ್ಪರ ಸಹಕಾರವೇ ಬದುಕಿನ ನಿಜವಾದ ಸಂಪತ್ತು ಎಂಬ ಸಂದೇಶವನ್ನು ಕಥಾಹಂದರದ ಮೂಲಕ ಕಟ್ಟಿಕೊಡಲಾಯಿತು.

ಮೂರು ದಿನಗಳ ನಾಟಕೋತ್ಸವವು ಹಾಸನದ ರಂಗಭೂಮಿ ಪ್ರೇಮಿಗಳಿಗೆ ಮರೆಯಲಾಗದ ಅನುಭವ ನೀಡುವುದರೊಂದಿಗೆ ಯಶಸ್ವಿಯಾಯಿತು.

## ಕಾವೇರಿ: ತೀರ್ಪು ವಿರೋಧಿಸಿ ಮನವಿ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕು ಮಿನಿ ವಿಧಾನಸೌಧದ ಮುಂದೆ ಕಾವೇರಿ ನೀರಿನ ತೀರ್ಪಿನ ಬಗ್ಗೆ ವಿರೋಧಿಸಿ ಕನ್ನಡ ಪರ, ರೈತ ಸಂಘ, ದಲಿತಪರ ಸಂಘ ಇತರೆ ಹೋರಾಟಗಾರರು ಘೋಷಣೆಗಳನ್ನು ಕೂಗಿ ತಹಸಿಲ್ದಾರ್ ಶಂಕರಪ್ಪ ಅವರಿಗೆ ಮನವಿ ಸಲ್ಲಿಸಿದರು.

ತಮಿಳುನಾಡಿಗೆ ಕಾವೇರಿ ನದಿ ನೀರು ಬಿಡುಗಡೆ ಆದೇಶ ಸರಿಯಿಲ್ಲ ಕನ್ನಡಿಗರಿಗೆ ಆಗುವ ಅನ್ಯಯ ಸರಿಪಡಿಸಬೇಕು ಮಳೆ ಅಭಾವದಿಂದ ಬರ ಪರಿಸ್ಥಿತಿ ಎದುರಾಗಿದೆ, ಹೇಮಾವತಿ ನಾಲೆಯಿಂದ ಕೆರೆಕಟ್ಟೆ ಏತನೀರಾವರಿಗಳಿಗೆ ನೀರು ತುಂಬಿಸಿ ಜನ-ಜಾನುವಾರುಗಳಿಗೆ ನೀರಿನ ಅಭಾವದಿಂದ ಆಗುವ ತೊಂದರೆಯನ್ನು ತಪ್ಪಿಸಬೇಕು, ಮೇಕೆದಾಟು ಯೋಜನೆ ಕಾರ್ಯಾಚರಣೆಯಾಗಬೇಕು ಎಂದು ಹೋರಾಟಗಾರರು ಒತ್ತಾಯಿಸಿದರು.

ಕನ್ನಡ ಪರ ಹೋರಾಟಗಾರ ಪುಟ್ಟಣ್ಣ ಗೋಕಾಕ್, ರೈತ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಜಿ.ರವಿ, ದಸಂಸ ಅಧ್ಯಕ್ಷ ತಿಮ್ಮಯ್ಯ, ಡಾ.ರಾಜ್ ಕುಮಾರ್ ಸಂಘದ ರೇವಣ್ಣ, ರಾಮಚಂದ್ರು, ಪುನಿತ್‌ರಾಜ್ ಕುಮಾರ್ ಅಭಿಮಾನಿಗಳ ಸಂಘದ ರುದ್ರೇಶ್, ಕೃಷ್ಣಪ್ಪ, ಕೆ.ವಿ.ಸತೀಶ್, ಕೆ. ಹೆಚ್.ಮಂಜುನಾಥ್, ಚಿಕ್ಕಣ್ಣ, ಕುಮಾರ್ ಅಣತಿ, ಸತೀಶ್‌ಗೌಡಗೆರೆ, ಸಿ.ಎಸ್.ಸ್ವಾಮಿ, ಕೇಶವಮೂರ್ತಿ ಇನ್ನಿತರರು ಹಾಜರಿದ್ದರು.






- **ಬಂಡೀಪುರ** ಮತ್ತು **ನಾಗರಹೊಳೆ ಅಭಯಾರಣ್ಯ**ಗಳಲ್ಲಿ **ಹುಲಿ ಸಫಾರಿ ಪುನರಾರಂಭ**
- ರಾಜ್ಯದ ಕರಾವಳಿ ತೀರದ **ಪ್ರವಾಸೋದ್ಯಮಕ್ಕೆ ಉತ್ತೇಜನ**
- ಕರ್ನಾಟಕ ಪ್ರವಾಸೋದ್ಯಮ ನೀತಿಯಡಿ **₹718.63 ಕೋಟಿ** ಅಂದಾಜು ಹೂಡಿಕೆಯ **45 ಬೃಹತ್ ಯೋಜನೆ**ಗಳಿಗೆ ಅನುಮೋದನೆ
- ಮುಜರಾಯಿ ಇಲಾಖೆಯ **33,000ಕ್ಕೂ ಹೆಚ್ಚು ದೇವಸ್ಥಾನಗಳ ಹುಂಡಿ ನಿರ್ವಹಣೆ** ಮತ್ತು **ರಕ್ಷಣೆಗೆ ಹೊಸ SOP ಜಾರಿ.** ವೀಡಿಯೋ ರೆಕಾರ್ಡಿಂಗ್, ಸಿಸಿಟಿವಿ ಹಾಗೂ ಡಿಜಿಟಲ್ ಪಾವತಿಗೆ ಒತ್ತು
- **ಮೈಸೂರು ದಸರಾದಲ್ಲಿ ಕಂಬಳ** ಆಯೋಜನೆ

**ಗ್ಯಾರಂಟಿ ಸರ್ಕಾರ**

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

C M Y K C M Y K C M Y K C M Y K

# ಗದ್ದಲದಲ್ಲೇ ಅಂತ್ಯ ಕಂಡ ಸಂಸತ್ ಅಧಿವೇಶನ

## ಚರ್ಚೆ ಇಲ್ಲದೇ 11 ಮಸೂದೆಗೆ ಅಂಗೀಕಾರ | ರಾಜ್ಯಸಭೆಯಲ್ಲೂ ಗಲಾಟೆ ಸದ್ದು

• ಪ್ರಜೋದಯ ವರದಿ



**ನವದೆಹಲಿ:** ಸಂಸತ್ತಿನ ಮುಂಗಾರು ಅಧಿವೇಶನ ಆ.13ರ ಗುರುವಾರ ಮುಕ್ತಾಯಗೊಂಡಿದ್ದು ಆಡಳಿತ-ಪ್ರತಿಪಕ್ಷಗಳ ಕೋಲಾಹಲಕ್ಕೆ ಈ ಬಾರಿಯ ಅಧಿವೇಶನ ಸಾಕ್ಷಿಯಾ ಯಿತು. ಈ ಮಧ್ಯೆ 12 ಮಸೂದೆಗಳು ಅಂಗೀಕಾರಗೊಂಡಿವೆ.

ಸಂಸತ್ತಿನ ಮುಂಗಾರು ಅಧಿವೇಶ ನದ ಕಲಾಪಗಳಿಗೆ ಕಾಂಗ್ರೆಸ್ ಅಡ್ಡಿ ಪಡಿಸಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಆರೋಪಿಸಿದರು.

ಅಧಿವೇಶನದ ಕೊನೇ ದಿನವೂ ಸದನದಲ್ಲಿ ಗದ್ದಲ ಏರ್ಪಟ್ಟಿತು. ಅದರಿಂದಾಗಿ, ಸಂಸತ್ತಿನ ಉಭಯ ಸದನಗಳು ಅನಿರ್ದಿಷ್ಟಾವಧಿಗೆ ಮುಂದೂಡಿಕೆಯಾದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿರುವ ರಿಜಿಜು, ಸದನದ ಕಲಾಪವು ಸರ್ಕಾರಕ್ಕೆ ತೃಪ್ತಿ ತಂದಿಲ್ಲ ಎಂದಿದ್ದಾರೆ. ಕೇಂದ್ರ ಸರ್ಕಾರವು ಚರ್ಚೆ ನಡೆಸಲು ಬಯಸುತ್ತಿರುವಾಗ, ವಿರೋಧ ಪಕ್ಷವು ಚರ್ಚೆಯಿಂದ ಪಲಾಯನ ಮಾಡುತ್ತಿರುವುದನ್ನು ಕಂಡಿದ್ದು ದೇಶದ ಇತಿಹಾಸದಲ್ಲಿ ಇದೇ ಮೊದಲು. ಸದನದ ಕಲಾಪಗಳಿಗೆ ಅಡ್ಡಿಯುಂಟಾಗಿದ್ದಕ್ಕೆ ಕಾಂಗ್ರೆಸ್ ಪಕ್ಷವೇ ಹೊಣೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಧಿವೇಶನದ ವೇಳೆ 12ಮಸೂದೆಗಳು ಅಂಗೀಕಾರಗೊಂಡಿವೆ. ದುರದೃಷ್ಟವಶಾತ್, ಅವುಗಳಲ್ಲಿ 11 ಮಸೂದೆಗಳು ಚರ್ಚೆಯೇ ಇಲ್ಲದೆ ಅಂಗೀಕಾರವಾಗಿವೆ. ಪ್ರಮುಖ ಪ್ರತಿ ಪಕ್ಷವಾದ ಕಾಂಗ್ರೆಸ್ ಮತ್ತು ಇನ್ನು ಕೆಲವು ಪಕ್ಷಗಳ ನಾಯ ಕರು ಚರ್ಚೆಯ ವೇಳೆ ಸದನದಿಂದ ಹೊರ ನಡೆದರು. ಉಳಿದ ವಿರೋಧ ಪಕ್ಷಗಳು ಚರ್ಚೆ ಯಲ್ಲಿ ಭಾಗವಹಿಸಿದವು ಎಂದು ತಿಳಿಸಿದ್ದಾರೆ.

ಹೌದು, ಸಂಸತ್ತಿನ ಮಾನ್ಸೂನ್ ಅಧಿವೇಶನ 2026ಕ್ಕೆ ವಿದ್ಯುಕ್ತ ತೆರೆ ಬಿದ್ದಿದೆ. ಆದರೆ ಇಡೀ ಅಧಿವೇಶನ ನೀಟ್ ಪರೀಕ್ಷಾ ಅಕ್ರಮ ಮತ್ತು ದೆಹಲಿ ವಿದ್ಯಾರ್ಥಿಗಳ ಪ್ರತಿಭಟನೆಗಳ ಸುತ್ತಲೇ ಗಿರಕಿ ಹೊಡೆದಿದ್ದು, ಜಂತರ್ ಮಂತರ್ ಪ್ರತಿಭಟನಾಕಾರರ ಮೇಲೆ ದೆಹಲಿ ಪೊಲೀಸರ ಕಠಿಣ ಕ್ರಮ ವಿಚಾರವಾಗಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ತೀವ್ರ ಮಾತಿನ ಚಕಮಕಿ ನಡೆದಿದೆ.

**ವಂದೇ ಮಾತರಂ ಒಗ್ಗಟ್ಟು**

ಅಧಿವೇಶನದ ಕೊನೆಯ ದಿನ ರಾಷ್ಟ್ರೀಯ ಗೀತೆ ವಂದೇ ಮಾತರಂ ಅನ್ನು ನುಡಿಸಲಾ ಯಿತು. ಪ್ರಧಾನಿ ನರೇಂದ್ರ ಮೋದಿ ಸೇರಿ ಸದನದ ಎಲ್ಲಾ ಸದಸ್ಯರು ಎದ್ದು ನಿಂತು ಗೌರವ ಸಲ್ಲಿಸಿದರು. ಈ ಸಮಯದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಒಗ್ಗಟ್ಟು ಕಂಡುಬಂತು. ಆ ಬಳಿಕ ಸ್ಪೀಕರ್ ಓಂ ಬಿರ್ಲಾ ಅವರು ಸದನವನ್ನು ಅನಿರ್ದಿಷ್ಟಾವಧಿಗೆ ಮುಂದೂಡುವ ಘೋಷಣೆ ಮಾಡಿದರು.

ಅದಕ್ಕೂ ಮೊದಲು ಬೆಳಿಗ್ಗೆ 11 ಗಂಟೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಲೋಕಸಭೆಗೆ ಆಗಮಿಸುತ್ತಿದ್ದಂತೆಯೇ, ವಿರೋಧ ಪಕ್ಷದ ಸದಸ್ಯರು ಕ್ಷಮೆ ಕೇಳಿ, ಕ್ಷಮೆ ಕೇಳಿ ಮತ್ತು ಲಾಠಿ ಚಾರ್ಜ್‌ಗೆ ಆದೇಶ ನೀಡಿದವರು ಯಾರು ಎಂದು ಘೋಷಣೆ ಕೂಗಲು ಪ್ರಾರಂಭಿಸಿದರು.

ಅಮಿತ್ ಶಾ ಅವರು ಎಲ್ಲರಿಗೂ ತಮ್ಮ ಆಸನಗಳಲ್ಲಿ ಕುಳಿತುಕೊಳ್ಳುವಂತೆ ಸನ್ನೆ ಮಾಡಿದರು. ಅದನ್ನು ಆಡಳಿತ ಪಕ್ಷದ ಸದಸ್ಯರು ಪಾಲಿಸಿದರೆ, ವಿರೋಧ ಪಕ್ಷಗಳ ಸದಸ್ಯರು ತಮ್ಮ ಧಿಕ್ಕಾರದ ಘೋಷಣೆಗಳನ್ನು ಮುಂದುವರಿಸಿದರು. ಸದನದಲ್ಲಿ ಸ್ಪಷ್ಟನೆ ನೀಡಲು ಸಿದ್ಧ ಎಂಬ ಅಮಿತ್ ಶಾ ಹೇಳಿಕೆ ಬಳಿಕವೂ, ವಿರೋಧ ಪಕ್ಷಗಳು ಅವರ ರಾಜೀನಾಮೆ ಬೇಡಿಕೆಯನ್ನು ಮುಂದು ವರೆಸಿದವು.

ಕುತೂಹಲಕಾರಿ ಸಂಗತಿಯೆಂದರೆ, ಅಧಿವೇಶನದ ಅವಧಿಯಲ್ಲಿ ಲೋಕಸಭೆಯ ಕಾರ್ಯಕ್ಷಮತೆ ಮತ್ತು ಉತ್ಪಾದಕತೆಯನ್ನು ಎತ್ತಿ ತೋರಿಸುವ ವಾಡಿಕೆಯ ಸಮಾರೋಪ ಭಾಷಣವನ್ನು, ಸ್ಪೀಕರ್ ಓಂ ಬಿರ್ಲಾ ಈ ಬಾರಿ ಓದಲಿಲ್ಲ. ಏಕೆಂದರೆ ಅಲ್ಲಿ ಪ್ರಸ್ತಾಪಿಸಲು ಅಂತಹ ವಿಶೇಷ ವಿಷಯಗಳು ಇರಲಿಲ್ಲ.

ಜುಲೈ 20ರಂದು ಪ್ರಾರಂಭವಾದ ಈ ಅಧಿವೇಶನದುದ್ದಕ್ಕೂ, ವಿರೋಧ ಪಕ್ಷಗಳು ತೀವ್ರ ಪ್ರತಿಭಟನೆ ನಡೆಸಿದವು. ಆರಂಭದಲ್ಲಿ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿಷಯದ ಕುರಿತು ಮತ್ತು ನಂತರ ಅಯೋಧ್ಯೆಯ ರಾಮ ಮಂದಿರದಲ್ಲಿ ದೇಣಿಗೆ ಕಳುವಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿ ಪ್ರತಿಭಟನೆಗಳು ನಡೆದವು. ಈ ಮಧ್ಯೆ ಕೇಂದ್ರ ಸರ್ಕಾರ ಪರೀಕ್ಷಾ ಅಕ್ರಮ ತಡೆ ವಿಧೇಯಕಕ್ಕೆ ಅಂಗೀಕಾರ ಪಡೆದುಕೊಂಡಿತು.

ಉತ್ತರಾಖಂಡ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ ನಡೆಸಿದ ಸಾರ್ವಜನಿಕ ಸಭೆಯ ಬಳಿಕ ಆ ಸ್ಥಳದ ಶುದ್ಧೀಕರಣಕ್ಕಾಗಿ ಹೋಮ ಆಯೋಜನೆ ಮಾಡಿದ್ದು ರಾಜ್ಯಸಭೆಯಲ್ಲಿ ಭಾರೀ ಗದ್ದಲಕ್ಕೆ ಕಾರಣವಾಯಿತು. ಮಲ್ಲಿಕಾರ್ಜುನ ಖರ್ಗೆ ಅವರು ತಮಗೆ ಅಪಮಾನವಾಗಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಅದಕ್ಕೆ ಆಡಳಿತ ಪಕ್ಷದ ನಾಯಕ ಜೆ.ಪಿ.ನಡ್ಡಾ ಅವರು, ಈ ಬಗ್ಗೆ ವರದಿ ತರಿಸಿಕೊಂಡು ಕ್ರಮಕೈಗೊಳ್ಳುವ ಭರವಸೆ ನೀಡಿದರು.

## ಮಾನವ-ಆನೆ ಸಂಘರ್ಷ: ತಜ್ಞರ ತಂಡ ಕಳುಹಿಸುವಂತೆ ಮನವಿ

• ಪ್ರಜೋದಯ ವರದಿ

**ನವದೆಹಲಿ:** ಹಾಸನ ಜಿಲ್ಲೆಯ ಮಲೆನಾಡು ಭಾಗದಲ್ಲಿ ಮಾನವ-ಆನೆ ಸಂಘರ್ಷ ಮಿತಿ ಮೀರಿದ್ದು ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಹಾಗು ವಾಸ್ತವ ಸ್ಥಿತಿ ಅರಿಯಲು ಕೇಂದ್ರ ಸರ್ಕಾರ ವಿಶೇಷ ತಂಡವನ್ನು ಕಳುಹಿಸಿ ಕೊಡಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರಿಗೆ ಮನವಿ ಸಲ್ಲಿಸಿದರು.

ಜಿಲ್ಲೆಯಲ್ಲಿ 90ಕ್ಕೂ ಹೆಚ್ಚು ಆನೆಗಳು ಸಂಚರಿಸುತ್ತಿದ್ದು, ಇದುವರೆಗೆ ಆನೆ ದಾಳಿಯಿಂದ 80ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ಮಾನವ ಜೀವಗಳಿಗೆ ಮುಂದುವರಿದಿರುವ ಅಪಾಯ ವನ್ನು ಗಮನದಲ್ಲಿಟ್ಟುಕೊಂಡು ಈ ಹಿಂದೆ ಭರವಸೆ ನೀಡಿರುವ ತಜ್ಞರ ತಂಡದ ಭೇಟಿಯನ್ನು ಯಾವುದೇ ವಿಳಂಬವಿಲ್ಲದೆ ತಕ್ಷಣ ಆಯೋಜಿಸಬೇಕೆಂದರು.

ಭೇಟಿ ನೀಡುವ ತಂಡದಲ್ಲಿ ಹಿರಿಯ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆಗೆ ಅನುಭವಿ ಆನೆ ತಜ್ಞರು, ವನ್ಯಜೀವಿ



ತಜ್ಞರು ಹಾಗು ವಿಜ್ಞಾನಿಗಳಿರಬೇಕು. ಹಾಸನದ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ, ರೈತರು ಹಾಗು ಸ್ಥಳೀಯ ಜನರೊಂದಿಗೆ ನೇರವಾಗಿ ಚರ್ಚಿಸಿ ಮಾನವ-ಆನೆ ಸಂಘರ್ಷಕ್ಕೆ ಶಾಶ್ವತ ಮತ್ತು ವೈಜ್ಞಾನಿಕ ಪರಿಹಾರ ರೂಪಿಸುವಂತೆ ಸಂಸದರು ಮನವಿ ಮಾಡಿದರು.

## ಸ್ವಯಂ ಪ್ರೇರಿತ ತೆರವು ಮೂಲಕ ಮಾದರಿಯಾದ ವ್ಯಾಪಾರಿಗಳು

» ಮೊದಲನೇ ಪುಟದಿಂದ

ಜೊತೆಗೆ ಇನ್ನೊಂದು ಬದಿಯಲ್ಲಿ ಕಟ್ಟಡ ಕಟ್ಟಿಕೊಂಡು ಮುಂದೆ ಫುಟ್ ಪಾತ್‌ಗೆ ಶೀಟ್‌ನಿಂದ ಛಾವಣಿ ಮಾಡಿಕೊಂಡಿದ್ದವರೂ ಸಹ ಛಾವಣಿ ತೆಗೆದು ಹಾಕಿದರು.

ಕಾರ್ಯಾಚರಣೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಸಹಾಯಕ ಇಂಜಿನಿಯರ್ ವಿಘ್ನೇಶ್ವರ್, ಹಳೇಬೀಡು ಪೊಲೀಸ್ ಉಪನಿರೀಕ್ಷಕ ಮಂಜುನಾಥ್, ಹಗರೆ ಪೊಲೀಸ್ ಎಎಸ್‌ಐ ತೀರ್ಥಕುಮಾರ್ ಮತ್ತಿತರರಿದ್ದರು.

**ಹಳೇಬೀಡಿನಲ್ಲಿ ಒತ್ತುವರಿ ತೆರವಿಗೆ ಆಗ್ರಹ**

ಬೇಲೂರು ತಾಲ್ಲೂಕಿನ ಹಳೇಬೀಡಿನಲ್ಲಿ ಒತ್ತುವರಿ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ಹಗರೆಯಿಂದ ಹಳೇಬೀಡು ರಸ್ತೆ ಹಾಗು ಹುಲುಗುಂಡಿ ರಸ್ತೆ ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಶೆಡ್‌ಗಳನ್ನು ತೆರವುಗೊಳಿಸುವಂತೆ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳಿಗೆ ಸಾರ್ವಜನಿಕರು ಮನವಿ ಮಾಡಿದರು.

ಹಗರೆ-ಹಳೇಬೀಡು ರಸ್ತೆಯ ಶಾಲಾ ಕಟ್ಟಡದ ಕಾಂಪೌಂಡ್‌ಗೆ ಹೊಂದಿಕೊಂಡಂತೆ ಅನಧಿಕೃತವಾಗಿ ಅಂಗಡಿಗಳನ್ನು ನಿರ್ಮಿಸಿದ್ದು ತೆರವುಗೊಳಿಸಬೇಕು. ಬೇಲೂರು ರಸ್ತೆಯಲ್ಲಿ ಮಾಂಸದಂಗಡಿಗಳಿದ್ದು, ತ್ಯಾಜ್ಯ ರಸ್ತೆಯಲ್ಲಿ ಎಸೆಯುತ್ತಿರುವುದರಿಂದ ರಸ್ತೆಯಲ್ಲಿ ತಿರುಗಾಡಲು ಸಾಧ್ಯವಾಗುತ್ತಿಲ್ಲ. ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

## ಆ.18 ರಂದು ಕೆಲಸ ಬಹಿಷ್ಕರಿಸಿ ಪಂಚಾಯಿತಿ ನೌಕರರ ಪ್ರತಿಭಟನೆ

### ಕನಿಷ್ಠ ವೇತನ ತಕ್ಷಣ ಜಾರಿಗೆ ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಆಗ್ರಹ

• ಪ್ರಜೋದಯ ವರದಿ




**ಹಾಸನ:** ಸರ್ಕಾರದ ಅಧಿಸೂಚನೆ ಅನ್ವಯ ಗ್ರಾಮ ಪಂಚಾಯಿತಿ ನೌಕರರಿಗೆ ಸರ್ಕಾರ ನಿಗದಿಪಡಿಸಿರುವ ವೈಜ್ಞಾನಿಕ ಕನಿಷ್ಠ ವೇತನವನ್ನು ತಕ್ಷಣವೇ ಜಾರಿಗೊಳಿಸಲು ಒತ್ತಾಯಿಸಿ ಆ.18 ರಂದು ಜಿಲ್ಲಾ ಪಂಚಾಯಿತಿ ಕಚೇರಿ ಮುಂದೆ ಪಂಚಾಯಿತಿ ನೌಕರರು ಕೆಲಸ ಬಹಿಷ್ಕರಿಸಿ ಪ್ರತಿಭಟನೆ ನಡೆಸಲಿದ್ದಾರೆಂದು ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ನೌಕರರಿಗೆ ವೈಜ್ಞಾನಿಕ ಕನಿಷ್ಠ ವೇತನ ಪರಿಷ್ಕರಣೆ ಮಾಡಿ ಜಾರಿಗೊಳಿಸಬೇಕೆಂದು ಕಳೆದ 2021-22ನೇ ಸಾಲಿನಿಂದ ಸರ್ಕಾರಕ್ಕೆ ಮನವಿ ಸಲ್ಲಿಸುತ್ತಾ, ನ್ಯಾಯಾಲಯದಲ್ಲಿ ಹಾಗು ಬೀದಿ ಹೋರಾಟಗಳ ಮೂಲಕ ಸಂಘವು ನಿರಂತರ ಪ್ರಯತ್ನ ನಡೆಸುತ್ತಾ ಬಂದಿದೆ. 2022 ಜುಲೈ 28 ರಂದು ಸರ್ಕಾರವು ನಗರ ಸ್ಥಳೀಯ ಸಂಸ್ಥೆಗಳು ಹಾಗು ಪಂಚಾಯತ್ ರಾಜ್ ಸಂಸ್ಥೆಗಳು ಅನುಸೂಚಿತ ಉದ್ದಿಮೆಗೆ ಕನಿಷ್ಠ ವೇತನ ವನ್ನು ಪರಿಷ್ಕರಿಸಿ ಅಧಿಸೂಚನೆ ಹೊರಡಿಸಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಅನುಮೋದನೆ ಪಡೆದು ಕಾರ್ಮಿಕ ಇಲಾಖೆ ಮೇ 22 ರಂದು ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸಲು ಅಂತಿಮ ಆದೇಶ ಹೊರಡಿಸಿದೆ. ಈ ಆದೇಶ ವನ್ನು ಜಾರಿಯಾಗದಂತೆ ತಡೆಯಲು ಖಾಸಗಿ ಆಡಳಿತ ಮಂಡಳಿಗಳು ಯತ್ನಿಸಿದ ಹಿನ್ನಲೆ ಕರ್ನಾಟಕದ ಮೂರೂ ಹೈಕೋರ್ಟ್ ಪೀಠಗಳಲ್ಲಿ ಕೇವಿಯೆಟ್ ದಾಖಲಾಗಿದೆ. ಪ್ರಸ್ತುತ ಕೋರ್ಟ್ ಸರ್ಕಾರ ಮತ್ತು ಆಡಳಿತ ಮಂಡಳಿಗಳಿಗೆ ನೋಟೀಸ್ ನೀಡಿದ್ದು, ವಿಚಾರಣೆ ನಡೆಯುತ್ತಿದೆ ಎಂದು ಹೇಳಿದರು.

ಕನಿಷ್ಠ ವೇತನ ಅಧಿಸೂಚನೆ ಜಾರಿಯಲ್ಲಿದ್ದರೂ ಪರಿಷ್ಕೃತ ಕನಿಷ್ಠ ವೇತನವನ್ನು ಸರ್ಕಾರ ಎಲ್ಲಾ ಗ್ರಾಮ ಪಂಚಾಯಿತಿ ನೌಕರರಿಗೆ ತಕ್ಷಣ ಜಾರಿಗೊಳಿಸಬೇಕು. ಎರಡು ತಿಂಗಳು ಕಳೆದರೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಗ್ರಾಮ ಪಂಚಾಯಿತಿ ನೌಕರರ ವೇತನಕ್ಕೆ ಅನುಗುಣವಾಗಿ ಅನುದಾನ ಬಿಡುಗಡೆ ಮಾಡುತ್ತಿಲ್ಲ. ಈ ಹಿನ್ನಲೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ನೌಕರರು ಕೆಲಸಗಳಿಗೆ ಗೈರುರಾಗಿ ಪ್ರತಿಭಟನೆ ನಡೆಸಲಿದ್ದಾರೆಂದು ತಿಳಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಟಿ.ಹೊನ್ನೇಗೌಡ, ಅಶೋಕ ಅತ್ನಿ, ಚಂದ್ರೇಗೌಡ, ನಂದೀಶ, ಲಕ್ಷ್ಮೇಗೌಡ ಇದ್ದರು.

## ಮನನೊಂದು ಮಗ ಆತ್ಮಹತ್ಯೆ | ತಂದೆ-ತಾಯಿ ಕಣ್ಣೀರು

# ನಿವೇಶನ ವಿಚಾರಕ್ಕೆ ಸಂಬಂಧಿಕರಿಂದ ಕಿರುಕುಳ

• ಪ್ರಜೋದಯ ವರದಿ




**ಹಾಸನ:** ನಿವೇಶನದ ವಿಚಾರಕ್ಕೆ ಸಂಬಂಧಿಕರು ಕಿರುಕುಳ ನೀಡಿದ್ದರಿಂದ ನಮ್ಮ ಮಗ ಆತ್ಮಹತ್ಯೆ ಮಾಡಿಕೊಂಡ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ದೂರು ನೀಡಿದರೂ ಪೊಲೀಸರು ನಮ್ಮ ಮೇಲೆಯೇ ದೌರ್ಜನ್ಯ ನಡೆಸಿದ್ದಾರೆಂದು ಹೊಳೆನರಸೀಪುರ ತಾಲ್ಲೂಕು ಹಳ್ಳಿ ಮೈಸೂರು ಹೋಬಳಿ ಕಡವಿನ ಬಾಚೀಹಳ್ಳಿ ಗ್ರಾಮದಲ್ಲಿ ಸಂತ್ರಸ್ತ ರಾದ ಮಹಾದೇವಿ, ಕುಮಾರ್ ಕಣ್ಣೀರಿಟ್ಟರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಬಂಧಿಕರಾದ ತಿಮ್ಮಶೆಟ್ಟಿ, ಶಿವಶೆಟ್ಟಿ, ದ್ರಾಕ್ಷಾಯಿಣಿ, ವನಿತಾ, ಸೋಮಶೆಟ್ಟಿ ಮೊದಲಾದವರು ನಮ್ಮ ಮಗನ ಮೇಲೆ ಕಳೆದ ಮಾರ್ಚ್‌ನಲ್ಲಿ ಹಲ್ಲೆ ಮಾಡಿ, ಬೆದರಿಕೆ ಹಾಕಿದ್ದಾರೆ. ಇದರಿಂದ ಮನನೊಂದ ಚಂದನ್ (22) ವಿಷ ಸೇವಿಸಿ ಆತ್ಮಹತ್ಯೆ ಮಾಡಿ ಕೊಂಡಿದ್ದಾನೆ. ಈ ಬಗ್ಗೆ ದೂರು ನೀಡಲು ಹೋದರೆ ಹಳ್ಳಿ ಮೈಸೂರು ಪಿಎಸ್‌ಐ ನವ್ಯ ಎಂಬುವವರು ನನ್ನ ಮೇಲೆ ರಕ್ತ ಬರುವಂತೆ ಹಲ್ಲೆ ಮಾಡಿದ್ದಾರೆಂದು ಕುಮಾರ್ ಅವರು ದೂರಿದರು.

ದಸಂಸ ಅಂಬೇಡ್ಕರ್ ಮಾರ್ಗ ಜಿಲ್ಲಾ ಸಂಚಾಲಕ ಮಿಲಿಟರಿ ಚನ್ನಕೇಶವ ಅವರು ಮಾತನಾಡಿ, ಕಿರುಕುಳ ನೀಡುತ್ತಿರುವವರೇ ಯುವಕ ಸ್ವಯಂ ಪ್ರೇರಿತವಾಗಿ ಅತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಪೊಲೀಸ್ ಠಾಣೆಗೆ ದೂರು ನೀಡಿ, ತಂದೆ- ತಾಯಿಯ ಅಸಹಾಯ ಸ್ಥಿತಿಯನ್ನು ದುರುಪಯೋಗ ಪಡಿಸಿಕೊಂಡು, ಮೃತದೇಹವನ್ನು ತಾವೇ ಸುಟ್ಟು ಹಾಕುವ ಮೂಲಕ ಸಾಕ್ಷ್ಯ ನಾಶ ಮಾಡಿದ್ದಾರೆ. ನಂತರ ಊರಿನವರೆಲ್ಲ ರಾಜೀ ಪಂಚಾಯಿತಿ ಮಾಡಿಸಿ ಮೃತ ಚಂದನ್ ಕುಟುಂಬಕ್ಕೆ 3 ಲಕ್ಷ ರೂ. ಹಣ ಕೊಡಿಸಿ ಇಡೀ ಪ್ರಕರಣ ಮುಚ್ಚಿ ಹಾಕಿದ್ದಾರೆ ಎಂದು ಆರೋಪಿಸಿದರು.

ಇದಾದ ಬಳಿಕವೂ ತಿಮ್ಮಶೆಟ್ಟಿ ಮತ್ತವರ ಕಡೆಯಿಂದ ಜಾಗಕ್ಕಾಗಿ ಕಿರುಕುಳ ಮುಂದುವರಿದಿದೆ. ಇತ್ತೀಚೆಗೆ ಮಹಾದೇವಿ ದಂಪತಿ ಮೇಲೆ ಹಲ್ಲೆ ಸಹ ಮಾಡಲಾಗಿದೆ. ಮೇಲಾಧಿಕಾರಿಗಳು ಮಧ್ಯೆ ಪ್ರವೇಶಿಸಿ ಮರು ತನಿಖೆ ನಡೆಸುವ ಮೂಲಕ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದರು.

ಕೆ.ವೈ.ಜಗದೀಶ್, ಗಂಗಾಧರ್, ಸಿದ್ದಪ್ಪ ಇದ್ದರು.

## ಸುಗಮ ಕಲಾಪ ನಡೆಸಲು ಸಹಕರಿಸಿ

» ಮೊದಲನೇ ಪುಟದಿಂದ

ಅವರು ವಿಪಕ್ಷ ಸದಸ್ಯರ ಬಳಿಗೆ ತೆರಳಿ ಕುಶಲೋಪರಿ ವಿನಿಮಯ ಮಾಡಿಕೊಂಡರು. ಪರಿಷತ್ ವಿಪಕ್ಷ ನಾಯಕರ ಪಕ್ಕದಲ್ಲೇ ಬಸವರಾಜ ಹೊರಟ್ಟಿ ಅವರ ಆಸನವನ್ನು ವ್ಯವಸ್ಥೆಗೊಳಿಸಲಾಗಿತ್ತು. ನೂತನವಾಗಿ ಆಯ್ಕೆಯಾದ ಪರಿಷತ್ ಸದಸ್ಯರಾದ ವಿನಯ್ ಕಾರ್ತಿಕ್, ಮಳವಳ್ಳಿ ಶಿವಣ್ಣ, ರಘು ಕೌಟಿಲ್ಯ, ಲಿಂಗರಾಜ್ ಪಾಟೀಲ್ ಹಾಗು ಪಿ.ವಿ.ಮೋಹನ್ ಪರಸ್ಪರ ಶುಭಾಶಯ ತಿಳಿಸಿದರು.

ಬಳಿಕ ಕಲಾಪವನ್ನು ಉದ್ದೇಶಿಸಿ ಮಾತನಾಡಿದ ಯತೀಂದ್ರ ಅವರು, ಮೊದಲ ಬಾರಿ ಸಚಿವನಾಗಿ, ಸಭಾನಾಯಕನಾಗಿ ಆಯ್ಕೆ ಆಗಿದ್ದೇನೆ. ಅನುಭವ ಕಡಿಮೆ ಇರುವ ಕಾರಣ ಏನಾದರೂ ತಪ್ಪಾದರೆ ಸರಿಪಡಿಸಿ ಮಾರ್ಗದರ್ಶನ ನೀಡುವಂತೆ ಆಡಳಿತ ಮತ್ತು ವಿಪಕ್ಷ ಸದಸ್ಯರಲ್ಲಿ ಕೋರಿದರು.

## ಬ್ರಿಟನ್‌ನಲ್ಲಿ ತಾಪಮಾನ ಏರಿಕೆ: ಜನ ತತ್ತರ, ನೀರಿನ ಕೊರತೆ

• ಪ್ರಜೋದಯ ವರದಿ

**ಲಂಡನ್:** ಪಶ್ಚಿಮ ಯುರೋಪಿನ ಅನೇಕ ಭಾಗಗಳಲ್ಲಿ ಗುರುವಾರ ಮತ್ತೊಮ್ಮೆ ಅಧಿಕ ತಾಪಮಾನ ದಾಖಲಾಗಿದ್ದು, ನಾಗರಿಕರು ತತ್ತರಿಸಿದ್ದಾರೆ.

ಮಧ್ಯ ಮತ್ತು ಆಗ್ನೇಯ ಬ್ರಿಟನ್‌ನಲ್ಲಿ ತಾಪಮಾನವು 38 ಡಿಗ್ರಿ ಸೆಲ್ಸಿಯಸ್‌ವರೆಗೆ ಏರಿಕೆಯಾಗಲಿದೆ. ಇದು 2003ರ ಆಗಸ್ಟ್‌ನಲ್ಲಿ ದಾಖಲಾಗಿದ್ದ 38.5 ಡಿಗ್ರಿ ಸೆಲ್ಸಿಯಸ್‌ನ ದಾಖಲೆಯನ್ನು ಮೀರುವ ಸಾಧ್ಯತೆಯೂ ಇದೆ ಎಂದು ಹವಾಮಾನ ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ದಾಖಲೆಯ ತಾಪಮಾನವನ್ನು ನಿಭಾಯಿಸಲು ಇಂಗ್ಲೆಂಡ್ ಸಜ್ಜಾಗಿಲ್ಲ. ಹೀಗಾಗಿ, ಕೆಲ ವಾರಗಳು ಜನರಿಗೆ ಅನುಕೂಲಕರವಾಗಿರಲಿವೆ ಎಂದು ಹೇಳಿದ್ದಾರೆ.

## ತ್ಯಾಗ-ಬಲಿದಾನದ ಸ್ವಾತಂತ್ರ್ಯ ಕಥೆ ಎಲ್ಲರಿಗೂ ತಿಳಿಯಲಿ

• ಪ್ರಜೋದಯ ವರದಿ



**ಹಾಸನ:** ಸಹಸ್ರಾರು ಜನರ ಬಲಿದಾನ, ತ್ಯಾಗದಿಂದ ದೊರೆತಿರುವ ಸ್ವಾತಂತ್ರ್ಯ ವನ್ನು ರಕ್ಷಿಸಿ ಭವಿಷ್ಯದ ಪೀಳಿಗೆಗೆ ಸ್ವಾತಂತ್ರ್ಯ ಹೋರಾಟವನ್ನು ಹೇಳಿಕೊಡುವ ಕೆಲಸ ನಮ್ಮಿಂದ ಆಗಬೇಕಿದೆ ಎಂದು ಬಿಜೆಪಿ ಜಿಲ್ಲಾ ಉಸ್ತುವಾರಿ ದತ್ತಾತ್ರೇಯ ಅವರು ಹೇಳಿದರು.

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಮುಂಭಾಗ ಗುರುವಾರ ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸಾವಿರಾರು ದೇಶಪ್ರೇಮಿಗಳು ಯಾವ ಸ್ವಾರ್ಥವಿಲ್ಲದೆ ಬ್ರಿಟಿಷರ ವಿರುದ್ಧ ಹೋರಾಡಿ ದೇಶವನ್ನು ದಾಸ್ಯದಿಂದ ಬಿಡುಗಡೆ ಮಾಡಿದರು. ಆದರೆ ಇಂದಿರಾ ಗಾಂಧಿ ಆಡಳಿತಾವಧಿಯಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮೂಲಕ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲಾಯಿತು. ದೇಶದ ಜನರು, ಪ್ರಜೆಗಳು ಯಾವುದೇ ರಾಜಕೀಯ ಪಕ್ಷಗಳು ದೇಶಕ್ಕೆ ಕುತ್ತು ಬಂದಾಗ ದೇಶ ಮೊದಲು ಎಂಬ ಭಾವನೆ ಹೊಂದಿರಬೇಕೆಂದರು.

ಈ ತಿರಂಗ ಯಾತ್ರೆ ಮೂಲಕ ಧ್ವಜ ಹಿಡಿದುಕೊಂಡು ಮನೆ ಮೇಲೆ ಕಟ್ಟಿ ಸಂಭ್ರಮಿಸುವ ಕೆಲಸ ಆಗಬೇಕಾಗಿದೆ ಎಂದು ದೇಶದ ಪ್ರಧಾನಿ ನರೇಂದ್ರ ಮೋದಿ ಕರೆ ಕೊಟ್ಟಿದ್ದಾರೆ. ಇದು ಶೋಯಾತ್ರೆಯಲ್ಲ. ಅಂಗಡಿ, ಮನೆ ಮೇಲೆ ಧ್ವಜಾ ಹಾರಿಸಿ ಸಂಭ್ರಮಿಸಬೇಕು. ಇದೊಂದು ಹಬ್ಬವನ್ನಾಗಿ ಆಚರಿಸಬೇಕು. ಸೈನಿಕರ ಹೋರಾಟ ನಾವು ಮರೆಯುವ ಹಾಗಿಲ್ಲ. ಜೀವನವನ್ನೆ ತ್ಯಾಗ ಮಾಡಿ ಸೇವೆ ಮಾಡಿದ್ದಾರೆ. ಅವರಿಗೆ ಒಂದು ಸೆಲ್ಯೂಟ್ ಕೊಡುವುದರ ಮೂಲಕ ನಮ್ಮ ಸೇನಾನಿಗೆ ಗೌರವ ಕೊಡಬೇಕೆಂದು ನಮ್ಮ ಪ್ರಧಾನಿ ಹೇಳಿದ್ದಾರೆಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಅವರು ಮಾತನಾಡಿ, ಭಾರತೀಯರು ಮುಕ್ತವಾಗಿ ಸಂಚರಿಸಲು ಸಾಧ್ಯವೇ ಇಲ್ಲ ಎಂಬ ಪರಿಸ್ಥಿತಿ ಇದ್ದ ಜಮ್ಮು-ಕಾಶ್ಮೀರದಲ್ಲಿ ತ್ರಿವರ್ಣ ಧ್ವಜ ಹಾರಿಸಲು ನಮ್ಮ ಪ್ರಧಾನಿ ಅನುವು ಮಾಡಿಕೊಟ್ಟಿದ್ದಾರೆ. ಇದು ದೇಶಭಕ್ತ ಪ್ರಧಾನಿ ಆಗಿರುವುದರಿಂದ ಸಾಧ್ಯವಾಗಿದೆ ಎಂದರು.

ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ರಾಜಕುಮಾರ್, ಗಿರೀಶ್ ನಂಬಿಹಳ್ಳಿ, ಜಿಲ್ಲಾ ಉಪಾಧ್ಯಕ್ಷ ಚಂದ್ರಶೇಖರ್, ಹುಡಾ ಮಾಜಿ ಅಧ್ಯಕ್ಷ ನವಿಲೆ ಅಣ್ಣಪ್ಪ, ಜಿಲ್ಲಾ ಕಾರ್ಯ ದರ್ಶಿ ತೂಬಿನಕೆರೆ ಗಿರೀಶ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನೇತ್ರಾವತಿ ಮಂಜುನಾಥ್, ಚನ್ನಕೇಶವ, ಕಟ್ಟಾಯ ಶಿವಕುಮಾರ್, ಜಿಲ್ಲಾ ವಕ್ತಾರ ಆರ್. ಮೋಹನ್ ಮೊದಲಾದವರಿದ್ದರು.

ರಾಷ್ಟ್ರಧ್ವಜ ಹಿಡಿದು ಬೈಕ್‌ಗಳಲ್ಲಿ ಸಾಗಿದ ಬಿಜೆಪಿ ಮುಖಂಡರು, ಪದಾಧಿಕಾರಿಗಳು ಹಾಗು ಕಾರ್ಯಕರ್ತರು ದೇಶಭಕ್ತಿ ಮತ್ತು ರಾಷ್ಟ್ರಾಭಿಮಾನದ ಸಂದೇಶ ಸಾರಿದರು. ಬಾಲಕಿಯರ ಪದವಿ ಪೂರ್ವ ಕಾಲೇಜು ಮುಂಭಾಗದಿಂದ ಆರಂಭಗೊಂಡ ಜಾಥಾ ಎಂ.ಜಿ.ರಸ್ತೆ, ಫುಡ್ ಕೋರ್ಟ್ ರಸ್ತೆ, ಎಂ.ಸಿ.ಇ. ಕಾಲೇಜು ಗಣಪತಿ ದೇವಸ್ಥಾನದ ಪಕ್ಕದ ರಸ್ತೆ, ಆಕಾಶವಾಣಿ, ಜಿಲ್ಲಾ ಕ್ರೀಡಾಂಗಣ ಮುಂಭಾಗ, ಸಹ್ಯಾದ್ರಿ ವೃತ್ತ, ಮಹಾವೀರ ವೃತ್ತ, ದೇವಿಗೆರೆ ರಸ್ತೆ, ಸುಭಾಷ್ ವೃತ್ತ, ಬಿ.ಎಂ.ರಸ್ತೆ, ಸುವರ್ಣ ಹೋಟೆಲ್ ರಸ್ತೆ ಮೂಲಕ ಸಂತೆಪೇಟೆ ವೃತ್ತ ತಲುಪಿತು. ನಂತರ ಎನ್.ಆರ್. ವೃತ್ತ, ಹಳೆ ಬಸ್ ನಿಲ್ದಾಣ ರಸ್ತೆ ಮಾರ್ಗವಾಗಿ ಬಂದು ಆರಂಭ ಸ್ಥಳದಲ್ಲೇ ಅಂತ್ಯಗೊಂಡಿತು.

## ಚಿಟ್ಟನಹಳ್ಳಿ ಬಡಾವಣೆಯಲ್ಲಿ ಶುಚಿತ್ವ ಕೊರತೆ

• ಪ್ರಜೋದಯ ವರದಿ



**ಹೊಳೆನರಸೀಪುರ:** ಪುರಸಭೆ ವ್ಯಾಪ್ತಿಯ 13ನೇ ವಾರ್ಡ್‌ನ ಚಿಟ್ಟನಹಳ್ಳಿ ಬಡಾವಣೆಯಲ್ಲಿ ಶುಚಿತ್ವವಿಲ್ಲದೆ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಸರ್ಕಾರಿ ನರ್ಸಿಂಗ್ ಕಾಲೇಜು, ನ್ಯಾಯಾಧೀಶರ ವಸತಿ ಗೃಹ, ಶ್ರೀ ವೆಂಕಟೇಶ್ವರ ವಿದ್ಯಾ ಸಂಸ್ಥೆ ಜೊತೆಗೆ ಸರ್ಕಾರಿ ಶಿಕ್ಷಕರು, ನೌಕರರು ಮತ್ತು ವಕೀಲರ ನಿವಾಸಗಳಿಂದ ಕೂಡಿದ ಪ್ರತಿಷ್ಠಿತ ಬಡಾವಣೆ ಎಂಬ ಹೆಗ್ಗಳಿಕೆ ಇದ್ದರೂ ಕಸದ ಸಮರ್ಪಕ ವಿಲೇವಾರಿ ಇಲ್ಲದೆ ಮತ್ತು ಚರಂಡಿಗಳ ಸರಿಯಾದ ನಿರ್ವಹಣೆ ಇಲ್ಲದಿರುವುದು ಸಾರ್ವಜನಿಕರ ಆರೋಗ್ಯಕ್ಕೂ ಕಂಟಕವಾಗಿದೆ.

ಪೌರ ಕಾರ್ಮಿಕರು ದಿನನಿತ್ಯ ಮನೆ ಮನೆಯಿಂದ ಕಸ ಸಂಗ್ರಹಿಸಲು ಬಾರದಿರುವುದರಿಂದ ಮುಖ್ಯ ರಸ್ತೆ ಹಾಗು ಖಾಲಿ ನಿವೇಶನಗಳಲ್ಲಿ ಕಸದ ರಾಶಿ ಗೋಚರಿಸುತ್ತಿದೆ. ಚರಂಡಿಗಳಲ್ಲಿ ಗಿಡ ಗಂಟಿಗಳು ಬೆಳೆದಿರುವ ಜೊತೆಗೆ ಪ್ಲಾಸ್ಟಿಕ್ ಹಾಗು ಹೂಳು ತುಂಬಿದ್ದು, ಕೊಳಚೆ ನೀರು ಸರಾಗ ವಾಗಿ ಹರಿಯಲು ಸಾಧ್ಯವಾಗದೆ ನಿಂತ ನೀರಿನಿಂದಾಗಿ ಸೊಳ್ಳೆಗಳ ಹಾವಳಿ ಮಿತಿಮೀರಿದೆ. ಹೀಗಾಗಿ ಡೆಂಗ್ಯೂ, ಮಲೇರಿಯಾದಂತಹ ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿದೆ.

ಪ್ರತಿದಿನ ಬೆಳಿಗ್ಗೆ ತಪ್ಪದೇ ಮನೆ ಮನೆಗೆ ಬಂದು ಕಸ ಸಂಗ್ರಹಿಸುವ ವಾಹನದ ವ್ಯವಸ್ಥೆ ಯಾಗಬೇಕು. ತಕ್ಷಣವೇ ಚರಂಡಿಯಲ್ಲಿರುವ ಹೂಳು ಮತ್ತು ಪ್ಲಾಸ್ಟಿಕ್ ತ್ಯಾಜ್ಯವನ್ನು ತೆಗೆದು ಕಲುಷಿತ ನೀರು ಹರಿಯಲು ದಾರಿ ಮಾಡಿಕೊಡಬೇಕು. ಬಡಾವಣೆಯಾದ್ಯಂತ ನಿಯಮಿತವಾಗಿ ಕ್ರಿಮಿನಾಶಕ ಸಿಂಪಡಣೆ ಮಾಡಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಅಥವಾ ಖಾಲಿ ಜಾಗಗಳಲ್ಲಿ ಕಸ ಎಸೆಯುವವರಿಗೆ ದಂಡ ವಿಧಿಸಬೇಕು.

ತಾಲ್ಲೂಕು ಆಡಳಿತದ ನೇತೃತ್ವದಲ್ಲಿ ಆರೋಗ್ಯ ಮತ್ತು ಪುರಸಭೆ ಅಧಿಕಾರಿಗಳು ಬಡಾವಣೆಯ ನಿವಾಸಿಗಳ ಆರೋಗ್ಯ ಮತ್ತು ನೈರ್ಮಲ್ಯದ ಹಿತದೃಷ್ಟಿಯಿಂದ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಮೂಲಕ ಸಮಸ್ಯೆ ನಿವಾರಿಸಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

## 30 ಗ್ರಾಂ ತೂಕದ ಚಿನ್ನದ ಸರ ಕಳವು

• ಪ್ರಜೋದಯ ವರದಿ

**ಹಾಸನ:** ಅರಸೀಕೆರೆ ತಾಲ್ಲೂಕಿನ ಮಾಲೇಕಲ್ ತಿರುಪತಿ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ರಥೋತ್ಸವ ನೋಡುತ್ತಾ ನಿಂತಿದ್ದಾಗ ವ್ಯಕ್ತಿಯ ಕೊರಳಿಂದ 30 ಗ್ರಾಂ ತೂಕದ ಚಿನ್ನದ ಸರ ಕಳವು ಮಾಡಿರುವ ಘಟನೆ ನಡೆದಿದ್ದು ತಡವಾಗಿ ಪ್ರಕರಣ ದಾಖಲಾಗಿದೆ.

ಶಾಂತಿನಗರದ ನಿವಾಸಿ ಹೆಚ್.ಕೆ.ಸುಬ್ರಹ್ಮಣ್ಯ ಸರ ಕಳೆದುಕೊಂಡವರು. ಜುಲೈ 26ರಂದು ಜಾತ್ರೆಗೆ ತೆರಳಿದ್ದ ಅವರು ರಥೋತ್ಸವ ನೋಡುತ್ತಿದ್ದಾಗ ಜನಜಂಗುಳಿಯ ನೂಕಾಟದಲ್ಲಿ ಕೆಳಗೆ ಬಿದ್ದಿದ್ದಾರೆ. ಕೆಲವು ಹೊತ್ತಿನ ಬಳಿಕ ಎದ್ದು ನೋಡಿದಾಗ ಸರ ನಾಪತ್ತೆಯಾಗಿರುವುದು ಗೊತ್ತಾಗಿದೆ. 15 ವರ್ಷಗಳ ಹಿಂದೆ ಮಾಡಿಸಿರುವ ಸರ ಅದಾಗಿದ್ದು ಪ್ರಸ್ತುತ 1.75 ಲಕ್ಷ ರೂ. ಮೌಲ್ಯ ಹೊಂದಿದೆ. ಅದನ್ನು ಹುಡುಕಿ ಕೊಡುವಂತೆ ಅವರು ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

## ಲಾರಿ ಡಿಕ್ಕಿ: ಬೈಕ್ ಸವಾರ ಸಾವು

• ಪ್ರಜೋದಯ ವರದಿ

**ಹೊಳೆನರಸೀಪುರ:** ಹಿಂದಿನಿಂದ ವೇಗವಾಗಿ ಬಂದ ಲಾರಿ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಪಟ್ಟಣದಲ್ಲಿ ಬುಧವಾರ ನಡೆದಿದೆ.

ಮೈಸೂರು ಜಿಲ್ಲೆ ಸಾಲಿಗ್ರಾಮ ತಾಲ್ಲೂಕು ಮಾಯಿಗೌಡನಹಳ್ಳಿ ಗ್ರಾಮದ ಎಂ.ಬಿ.ಭರತ್ ಮೃತರು. ಕಡವಿನಹೊಸಹಳ್ಳಿಯ ಸಹೋದರಿ ಮನೆಯಿಂದ ಸಂಜೆ 6ರ ಸಮಯದಲ್ಲಿ ಊರಿಗೆ ವಾಪಾಸ್ಸಾಗುತ್ತಿದ್ದಾಗ ಕೇರಳಾಪುರ ರಸ್ತೆಯ ತಿರುವಿನಲ್ಲಿ ವೇಗವಾಗಿ ಬಂದ ಲಾರಿ ಡಿಕ್ಕಿಯಾಗಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಇಂದು ಭಾರತ್ ಸಂಕಲ್ಪ ದಿವಸ್ ಆಚರಣೆ



• ಪ್ರಜೋದಯ ವರದಿ

**ಹಾಸನ:** ಹಿಂದೂ ಜಾಗರಣಾ ವೇದಿಕೆಯಿಂದ ಅಖಂಡ ಭಾರತ್ ಸಂಕಲ್ಪ ದಿವಸ್ ಹಿನ್ನಲೆ ಆ.14 ರಂದು ಸಂಜೆ ಪಂಜಿನ ಮೆರವಣಿಗೆ, ಸಭಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವೇದಿಕೆ ಅಧ್ಯಕ್ಷ ಲೋಕೇಶ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಎಂ.ಎಂ. ಮುಖ್ಯ ವ್ಯವಸ್ಥಾಪಕ ಡಾ.ಉಮೇಶ್ ವಹಿಸುವರು, ಮುಖ್ಯ ಅತಿಥಿಯಾಗಿ ಸೃಜನ್ ಲೋಕೇಶ್ ಭಾಗವಹಿಸುವರು. ದಾವಣಗೆರೆಯ ಸತೀಶ್ ಅವರು ದಿಕ್ಸೂಚಿ ಭಾಷಣ ಮಾಡುವರು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯಕ್ರಮ ನಡೆಯಲಿದೆ. ತ್ಯಾಗ-ಬಲಿದಾನದಂದ ಸ್ವಾತಂತ್ರ್ಯ ಬಂದಿದೆ ಎಂದು ಜನರಿಗೆ ಮನವರಿಕೆ ಮಾಡುವುದು ಇದರ ಉದ್ದೇಶವಾಗಿದೆ. 1947 ರಲ್ಲಿ ನಡೆದ ಮಾರಣಹೋಮ, ನರಹತ್ಯೆಯ ಬಗ್ಗೆ ಮುಂದಿನ ಪೀಳಿಗೆಗೆ ತಿಳಿಸುವುದು, ಜನ ಜಾಗೃತಿ ಮೂಡಿಸುವುದಾಗಿದೆ. ಪ್ರತಿಯೊಬ್ಬರೂ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ವೇದಿಕೆಯ ಪದಾಧಿಕಾರಿಗಳಾದ ಶಿವಾಜಿ, ಚೇತನ್, ಪುನೀತ್, ಶಶಾಂಕ್, ವೈಶಾಖ್, ಮಾದೇಶ ಇದ್ದರು.

### 15 ದಿನಗಳ ಹಿಂದಷ್ಟೇ ಪುನರ್‌ನಿರ್ಮಾಣ | ಮತ್ತೆ ಬಳಕೆಗೆ ಬಾರದ ಸ್ಥಿತಿ

# ನೀರಿಲ್ಲದೆ ಗಬ್ಬೆದ್ದು ನಾರುತ್ತಿದೆ ಸಾರ್ವಜನಿಕ ಶೌಚಾಲಯ

• ಪ್ರಜೋದಯ ವರದಿ



**ಸಕಲೇಶಪುರ:** ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಿ, ಪುನರ್‌ನಿರ್ಮಾಣಗೊಳಿಸಿದ ತಾಲ್ಲೂಕಿನ ಹೆತ್ತೂರು ಹೋಬಳಿ ವನಗೂರು ಕೂಡುರಸ್ತೆ ವೃತ್ತದಲ್ಲಿರುವ ಸಾರ್ವಜನಿಕ ಶೌಚಾಲಯವೊಂದು ನೀರಿನ ವ್ಯವಸ್ಥೆಯಿಲ್ಲದೆ ಇದೀಗ ಗಬ್ಬೆದ್ದು ನಾರುತ್ತಿದೆ.

ಸಕಲೇಶಪುರ, ಶನಿವಾರಸಂತೆ, ಬಿಸ್ಲೆ, ಸುಬ್ರಹ್ಮಣ್ಯ ಸೇರಿ ವಿವಿಧ ಭಾಗಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಸ್ಥಳವಾಗಿರುವ ವನಗೂರು ಕೂಡುರಸ್ತೆ ವೃತ್ತದಲ್ಲಿ ಪ್ರತಿದಿನ ನೂರಾರು ಜನರು ಸಂಚರಿಸುತ್ತಾರೆ. ಬೆಳಿಗ್ಗೆ ಹಾಗು ಸಂಜೆ ಹಲವು ಸರ್ಕಾರಿ ಬಸ್‌ಗಳು ಇಲ್ಲಿ ನಿಲುಗಡೆಗೊಳ್ಳುವುದರಿಂದ ಪ್ರಯಾಣಿಕರು, ವಿದ್ಯಾರ್ಥಿಗಳು, ಮಹಿಳೆಯರು, ಚಾಲಕರು, ನಿರ್ವಾಹಕರು ಹಾಗು ಪ್ರವಾಸಿಗರ ಓಡಾಟವೂ ಹೆಚ್ಚಿರುತ್ತದೆ. ಇಂತಹ ಪ್ರಮುಖ ಸ್ಥಳದಲ್ಲಿರುವ ಸಾರ್ವಜನಿಕ ಶೌಚಾಲಯಕ್ಕೆ ನೀರಿನ ವ್ಯವಸ್ಥೆ ಕಲ್ಪಿಸದ ಪರಿಣಾಮ, ಶೌಚಾಲಯ ಬಳಕೆಗೆ ಯೋಗ್ಯವಿಲ್ಲದಂತಾಗಿದೆ. ನೀರಿಲ್ಲದೆ ಸ್ವಚ್ಛತೆ ನಿರ್ವಹಣೆ ಸಾಧ್ಯವಾಗದೆ ಒಳಭಾಗದಲ್ಲಿ ಕೊಳಕು ತುಂಬಿಕೊಂಡಿದ್ದು, ಸುತ್ತಮುತ್ತಲೂ ದುರ್ವಾಸನೆ ಹರಡುತ್ತಿದೆ. ಶೌಚಾಲಯದ ಸಮೀಪ ಹಾದು ಹೋಗಲೂ ಸಾರ್ವಜನಿಕರು ಮೂಗು ಮುಚ್ಚಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ.

**ಮಹಿಳೆಯರಿಗೆ ತೀವ್ರ ಸಮಸ್ಯೆ**

ಶೌಚಾಲಯದ ಅವ್ಯವಸ್ಥೆಯಿಂದ ಮಹಿಳೆಯರು ಹಾಗು ವಿದ್ಯಾರ್ಥಿಗಳು ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ. ಅನಿವಾರ್ಯ ಸಂದರ್ಭಗಳಲ್ಲಿ ಶೌಚಾಲಯ ಬಳಸಲು ಸಾಧ್ಯವಾಗದೆ ಬಯಲು ಪ್ರದೇಶವನ್ನು ಆಶ್ರಯಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಪ್ರಮುಖ ಬಸ್ ನಿಲುಗಡೆ ಸ್ಥಳದಲ್ಲಿಯೇ ಇಂತಹ ಪರಿಸ್ಥಿತಿ ನಿರ್ಮಾಣವಾಗಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಹಳೆಯ ಶೌಚಾಲಯ ಕಟ್ಟಡವನ್ನು ಗ್ರಾಮ ಪಂಚಾಯಿತಿ ಅನುದಾನದಲ್ಲಿ ಸುಮಾರು 15 ದಿನಗಳ ಹಿಂದಷ್ಟೇ ಪುನರ್‌ನಿರ್ಮಾಣ ಮಾಡಲಾಗಿದೆ. ಹೊಸದಾಗಿ ಪುನರ್‌ನಿರ್ಮಾಣಗೊಂಡ ಶೌಚಾಲಯಕ್ಕೆ ಅಗತ್ಯ ಮೂಲಸೌಕರ್ಯದ ಭಾಗವಾದ ನೀರಿನ ವ್ಯವಸ್ಥೆ ಕಲ್ಪಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಹಣ ಖರ್ಚು ಮಾಡಿ ಶೌಚಾಲಯ ನಿರ್ಮಿಸಿ, ಅದಕ್ಕೆ ನೀರಿನ ವ್ಯವಸ್ಥೆಯನ್ನೇ ಕಲ್ಪಿಸದಿದ್ದರೆ ಪ್ರಯೋಜನವೇನು ಎಂದು ಸ್ಥಳೀಯರು ಪ್ರಶ್ನಿಸಿದ್ದಾರೆ.

ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ದೂರವಾಣಿ ಮೂಲಕ ಮಾಹಿತಿ ನೀಡಿದರೂ ಸೂಕ್ತ ಸ್ಪಂದನೆ ದೊರೆತಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

**ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ**

ಸಾರ್ವಜನಿಕರ ಆರೋಗ್ಯ ಹಾಗೂ ಸ್ವಚ್ಛತೆಗೆ ಸಂಬಂಧಿಸಿದ ವಿಚಾರದಲ್ಲಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ನಿರ್ಲಕ್ಷ್ಯ ತೋರಬಾರದು. ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಶೌಚಾಲ ಯದ ಸ್ಥಿತಿಗತಿಯನ್ನು ಪರಿಶೀಲಿಸಿ, ಸಮರ್ಪಕ ನೀರಿನ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ ಪ್ರತಿ ದಿನ ಸ್ವಚ್ಛತೆ ಹಾಗೂ ನಿಯಮಿತ ನಿರ್ವಹಣೆಗೆ ಸಿಬ್ಬಂದಿ ನಿಯೋಜಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ವಿದ್ಯಾರ್ಥಿಗಳು ಸಮಯಕ್ಕೆ ಆದ್ಯತೆ ನೀಡಬೇಕು



• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿ ಸಮಯ ಅಮೂಲ್ಯವಾಗಿದ್ದು ಅದನ್ನು ವ್ಯರ್ಥ ಮಾಡದೆ ಉನ್ನತ ಗುರಿ ಸಾಧನೆಗೆ ವಿನಿಯೋಗ ಮಾಡಿಕೊಳ್ಳಬೇಕೆಂದು ಹಾಸನಾಂಬ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಡಾ|| ಬಸವರಾಜು ಅವರು ಸಲಹೆ ನೀಡಿದರು.

ನಗರದ ಗುಡ್ ಸಿಟಿಜನ್ ಕಾಲೇಜಿನಲ್ಲಿ 2026-27ನೇ ಸಾಲಿನ ನೂತನ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ವಾಗತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಳೆದು ಹೋದ ಸಮಯ ವಾಪಾಸ್ ಬರುವುದಿಲ್ಲ. ವ್ಯಾಸಂಗವೊಂದೇ ವಿದ್ಯಾರ್ಥಿಗಳ ಪರಮ ಧ್ಯೇಯ ಆಗಿರ ಬೇಕು. ಇಲ್ಲವಾದರೆ ಭವಿಷ್ಯದ ದಿನಗಳು ಕಷ್ಟವಾಗುತ್ತವೆಂದರು.

ರೂರಲ್ ಎಜುಕೇಶನ್ ಟ್ರಸ್ಟ್ ಆಡಳಿತ ಅಧಿಕಾರಿ ಚಿಕ್ಕಯ್ಯ ಮಾತನಾಡಿದರು. ಗುಡ್ ಸಿಟಿಜನ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಡಾ.ಹೇಮಂತ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಪದವಿ ಕಾಲೇಜಿನ ಪ್ರಾಂಶುಪಾಲ ಕಾಂತರಾಜು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಜರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K